ವಿಶ್ವವಾಣಿ
ವಿಶ್ವಾಸವೇ ವಿಶ್ವ

ಬಾಹ್ಯಾಕಾಶದಿಂದ ಮರಳಿದ ಗಗನಯಾನಿ **ಶುಭಾಂಶು ಶುಕ್ಲಾ** ಅವರು ಪ್ರಧಾನಿ ಮೋದಿ ಅವರನ್ನು ಭೇಟಿಯಾಗಿ, ಬಾಹ್ಯಾಕಾಶಕ್ಕೆ ಕೊಂಡೊಯ್ದಿದ್ದ ತಿರಂಗಾವನ್ನು ಉಡುಗೊರೆಯಾಗಿ ನೀಡಿದರು.

ಬಿಜೆಪಿ ನೇತೃತ್ವದ ಎನ್‌ಡಿಎ ಮೈತ್ರಿಕೂಟದಿಂದ ಉಪರಾಷ್ಟ್ರಪತಿ ಅಭ್ಯರ್ಥಿಯಾಗಿ ನಾಮ ನಿರ್ದೇಶನವಾದ ಬೆನ್ನಲ್ಲೇ **ಸಿ.ಪಿ.ರಾಧಾಕೃಷ್ಣನ್** ಅವರು ಪ್ರಧಾನಿ ನರೇಂದ್ರ ಮೋದಿ ಅವರನ್ನು ಸೋಮವಾರ ಭೇಟಿಯಾದರು.

ವಾಂಗ್ ಯಿ-ದೋವಲ್ ಇಂದು ಗಡಿ ಮಾತುಕತೆ

ದೆಹಲಿ: ಗಡಿ ವಿಷಯಕ್ಕೆ ಸಂಬಂಧಿಸಿದಂತೆ ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಜತೆ ಮಾತುಕತೆ ನಡೆಸುವ ಸಂಬಂಧ ಚೀನಾ ವಿದೇಶಾಂಗ ಸಚಿವ ವಾಂಗ್ ಯಿ ಅವರು ಭಾರತಕ್ಕೆ 2 ದಿನಗಳ ಪ್ರವಾಸ ಕೈಗೊಂಡಿದ್ದಾರೆ. ಸೋಮವಾರ ದೆಹಲಿ ವಿಮಾನ ನಿಲ್ದಾಣದಲ್ಲಿ ವಾಂಗ್ ಯಿ ಅವರನ್ನು ವಿದೇಶಾಂಗ ಸಚಿವಾಲಯದ ಪೂರ್ವ ಏಷ್ಯಾ ವಿಭಾಗದ ಜಂಟಿ ಕಾರ್ಯದರ್ಶಿ ಗೌರಂಗ ಲಾಲ್‌ದಾಸ್ ಸ್ವಾಗತಿಸಿದರು. ವಾಂಗ್ ಯಿ ಮತ್ತು ದೋವಲ್ ಅವರು ಮಂಗಳವಾರ ಮಾತುಕತೆ ನಡೆಸಲಿದ್ದಾರೆ. ಇದು 24ನೇ ಸುತ್ತಿನ ಚರ್ಚೆಯಾಗಿದೆ.

10 ವರ್ಷಗಳಲ್ಲಿ ₹ 130 ಲಕ್ಷ ಕೋಟಿ ಸಾಲ ಹೆಚ್ಚಳ

ದೆಹಲಿ: ಕೇಂದ್ರ ಸರಕಾರದ ಸಾಲ ಕಳೆದ 10 ವರ್ಷಗಳಲ್ಲಿ ₹130 ಲಕ್ಷ ಕೋಟಿ ಹೆಚ್ಚಳ ಆಗಿದೆ. ಲೋಕಸಭೆಯಲ್ಲಿ ಪ್ರಶ್ನೋತ್ತರ ಅವಧಿಯಲ್ಲಿ ಸಂಸದ ಡಾ.ಎಂ.ಕೆ. ವಿಷ್ಣು ಪ್ರಸಾದ್ ಕೇಳಿದ ಪ್ರಶ್ನೆಗೆ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ನೀಡಿರುವ ಉತ್ತರದಲ್ಲಿ ಈ ಮಾಹಿತಿ ಇದೆ. 2015-16ರಲ್ಲಿ ಕೇಂದ್ರದ ಸಾಲವು ₹70.98 ಲಕ್ಷ ಕೋಟಿ ಆಗಿತ್ತು. 2025-26ರಲ್ಲಿ ₹200.16 ಲಕ್ಷ ಕೋಟಿಗೆ ಜಿಗಿದಿದೆ. ಕೇಂದ್ರವು ಈ ವರ್ಷ ₹4.61 ಲಕ್ಷ ಕೋಟಿ ಸಾಲ ಮರುಪಾವತಿ ಮಾಡಿದೆ. ಒಟ್ಟು ಸಾಲಕ್ಕೆ ಈ ವರ್ಷ ಪಾವತಿಸುತ್ತಿರುವ ಬಡ್ಡಿ ₹12.76 ಲಕ್ಷ ಕೋಟಿ.

ಅಗೆದಿರುವ ಗುಂಡಿಗಳ ವರದಿ ಬರುವ ತನಕ ಹೊಸ ಗುಂಡಿ ಅಗೆಯಲ್ಲ: ಪರಂ
ರಾಜ್ಯ ಸರಕಾರದ ಹಾರಿಕೆ ಉತ್ತರಕ್ಕೆ ಬಿಜೆಪಿ ಸದಸ್ಯರಿಂದ ಆಕ್ಷೇಪ, ಸಭಾತ್ಯಾಗ

ಗುಂಡಿ ಅಗೆತಕ್ಕೆ ತಾತ್ಕಾಲಿಕ ಬ್ರೇಕ್

ವಿಶ್ವವಾಣಿ ಸುದ್ದಿಮನೆ ವಿಧಾನಸಭೆ

ರಾಷ್ಟ್ರಾದ್ಯಂತ ಭಾರಿ ಸದ್ದಾಗಿದ್ದ ಬುರುಡೆ ಪ್ರಕರಣದ ತನಿಖೆಗೆ ತಾತ್ಕಾಲಿಕ ಬ್ರೇಕ್ ಬಿದ್ದಿದ್ದು, ಈಗಾಗಲೇ ಎಫ್‌ಎಸ್‌ಎಲ್‌ಗೆ ಕಳುಹಿಸಿರುವ ಮಾದರಿಯ ಫಲಿತಾಂಶ ಬರುವ ತನಕ ಹೊಸ ಗುಂಡಿ ತೆಗೆಯುವುದಿಲ್ಲ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ ಸ್ಪಷ್ಟಪಡಿಸಿದರು.

ವಿಧಾನಸಭೆಯಲ್ಲಿ ಸೋಮವಾರ ಮಧ್ಯಾಹ್ನ ವಿಶೇಷ ತನಿಖಾ ತಂಡದ ರಚನೆಯನ್ನು ಸಮರ್ಥಿಸಿಕೊಳ್ಳುವ ಜತೆಜತೆಗೆ ಹೊಸ ಗುಂಡಿಗಳನ್ನು ಅಗೆಯುವುದಿಲ್ಲ ಎನ್ನುವ ಮೂಲಕ ಅಡ್ಡ ಗೋಡೆಯ ಮೇಲೆ ದೀಪ ಇಡುವ ಪ್ರಯತ್ನ ಮಾಡಿದರು. ಆದರೆ ಪರಮೇಶ್ವರ ಹೇಳಿಕೆಗೆ ಬಿಜೆಪಿ ಶಾಸಕರು ಆಕ್ಷೇಪ ವ್ಯಕ್ತಪಡಿಸಿದ್ದು, ಎಸ್‌ಐಟಿ ರಚನೆ ಹಿಂದಿರುವ ಶಕ್ತಿ ಯಾವುದು? ಅನಾಮಧೇಯ ವ್ಯಕ್ತಿಯ ಹಿಂದಿರುವ ಷಡ್ಯಂತ್ರವೇನು? ಎನ್ನುವ ಬಗ್ಗೆ ಗೃಹ ಸಚಿವರು ಸ್ಪಷ್ಟನೆ ನೀಡಬೇಕು ಎಂದು ಪಟ್ಟು ಹಿಡಿದರು. ಈ ವೇಳೆ ಆಡಳಿತ-ಪ್ರತಿಪಕ್ಷ ಶಾಸಕರ ನಡುವೆ ಮಾತಿಗೆ ಮಾತು ಬೆಳೆದು ಕೆಲಕಾಲ ಸಭೆಯನ್ನು ಮುಂದೂಡಲಾಗಿತ್ತು. ಬಳಿಕ ವಿಧಾನಸಭೆ ನಡೆದಾಗಲೂ, ಸರಕಾರದ ನಡೆಯನ್ನು ಖಂಡಿಸಿ ಪ್ರತಿಪಕ್ಷ ಸದಸ್ಯರು ಸಭಾತ್ಯಾಗ ಮಾಡಿದರು. → 4

ಬಿಜೆಪಿ ಶಾಸಕರ ಆಕ್ಷೇಪ

ವಿಶೇಷ ತನಿಖಾ ತಂಡದಿಂದ ಮಧ್ಯಂತರ ವರದಿಯ ನಿರೀಕ್ಷೆಯಲ್ಲಿದ್ದ ಬಿಜೆಪಿ ನಾಯಕರು, ಪರಮೇಶ್ವರ ಅವರ ಹೇಳಿಕೆಗೆ ಆಕ್ಷೇಪ ವ್ಯಕ್ತಪಡಿಸಿದರು. ಯಾರ ಷಡ್ಯಂತ್ರವಿದೆ ಎನ್ನುವ ಬಗ್ಗೆ ಯಾವುದೇ ಪ್ರಸ್ತಾಪವಿಲ್ಲ. ಎಸ್‌ಐಟಿಗೆ ನಮ್ಮ ವಿರೋಧವಿಲ್ಲ. ಆದರೆ ಇದರ ಹೆಸರಲ್ಲಿ ಧರ್ಮಸ್ಥಳಕ್ಕೆ ಮಾಡುತ್ತಿರುವ ಅನ್ಯಾಯವನ್ನು ತಡೆಗಟ್ಟಲು ಸರಕಾರ ಏಕೆ ಸೂಚನೆ ನೀಡುತ್ತಿಲ್ಲ? ಸಾಮಾಜಿಕ ಜಾಲತಾಣಗಳಲ್ಲಿ ಬರುವ ಪೋಸ್ಟ್‌ಗಳ ವಿರುದ್ಧ ಕ್ರಮ ಏಕೆ ತೆಗೆದುಕೊಂಡಿಲ್ಲ? ಮುಸುಕುಧಾರಿಯ ಹಿಂದಿರುವ ಶಕ್ತಿಗಳೇನು? ಹಣಕಾಸು ನೆರವು ಎಲ್ಲಿಂದ ಬರುತ್ತಿದೆ? ಇದರ ಬಗ್ಗೆ ಸರಕಾರದ ನಡೆಯೇನು? ಎನ್ನುವ ಬಗ್ಗೆ ಮಾಹಿತಿ ನೀಡಬೇಕು ಎಂದು ಆಗ್ರಹಿಸಿದರು.

ಪರಮೇಶ್ವರ ಹೇಳಿದ್ದೇನು?

- ವಿಶೇಷ ತನಿಖಾ ತಂಡದಿಂದ ಯಾವುದೇ ಮಧ್ಯಂತರ ವರದಿ ಬಂದಿಲ್ಲ
- ಧರ್ಮಸ್ಥಳ ಬುರುಡೆ ಪ್ರಕರಣದಲ್ಲಿ ಸರಕಾರಕ್ಕೆ ಯಾವುದೇ ಹಿತಾಸಕ್ತಿ ಇಲ್ಲ
- ವೀರೇಂದ್ರ ಹೆಗ್ಗಡೆ ಕುಟುಂಬದ ವಿರುದ್ಧದ ಆರೋಪದ ಸತ್ಯ ಹೊರಬರಬೇಕಿದೆ
- ಯಾರ ಒತ್ತಡಕ್ಕೂ ಮಣಿದು ರಾಜ್ಯ ಸರಕಾರ ಎಸ್‌ಐಟಿ ರಚನೆ ಮಾಡಿಲ್ಲ

ಲಾಯರ್ ಜಗದೀಶ್‌ಗೆ ಸಂಕಷ್ಟ

ರಾಜಕಾರಣಿಗಳು ಸೇರಿದಂತೆ ಎಲ್ಲರ ವಿರುದ್ಧ ಏಕವಚನದಲ್ಲಿ ವಾಗ್ದಾಳಿ ನಡೆಸುವ ಮೂಲಕವೇ ಸಾಮಾಜಿಕ ಜಾಲತಾಣದಲ್ಲಿ ಕಾಣಿಸಿಕೊಳ್ಳುತ್ತಿದ್ದ ಲಾಯರ್ ಜಗದೀಶ್ ವಿರುದ್ಧ ಮಂಡಿಸಿದ ಹಕ್ಕು ಚ್ಯುತಿಯನ್ನು ಒಪ್ಪಿರುವ ಸದನ ಹಕ್ಕುಬಾಧ್ಯತಾ ಸಮಿತಿಗೆ ರವಾನಿಸಲು ತೀರ್ಮಾನಿಸಿದೆ.

ಅನಾಮಿಕ ತಪ್ಪೊಪ್ಪಿಗೆ?

ಬುರುಡೆ ರಹಸ್ಯ

ವಿಧಾನಸಭೆ ಹಾಗೂ ಪರಿಷತ್‌ನಲ್ಲಿ ಈ ವಿಷಯಕ್ಕೆ ಸಂಬಂಧಿಸಿದಂತೆ ಪರ-ವಿರೋಧ ಚರ್ಚೆಯ ಸಮಯದಲ್ಲಿಯೇ, ಧರ್ಮಸ್ಥಳದಲ್ಲಿರುವ ಎಸ್‌ಐಟಿ ಮುಂದೆ ಅನಾಮಧೇಯ ವ್ಯಕ್ತಿ ತಪ್ಪೊಪ್ಪಿ ಕೊಂಡಿದ್ದಾನೆ ಎನ್ನುವ ಮಾತುಗಳು ಪ್ರಕರಣಕ್ಕೆ ಭಾರಿ ಟ್ವಿಸ್ಟ್ ನೀಡಿದೆ.

ಮೂಲಗಳ ಪ್ರಕಾರ, 'ಒತ್ತಡಕ್ಕೆ ಒಳಗಾಗಿ ಸುಳ್ಳು ಹೇಳಿಕೆ ದಾಖಲಿಸಿದ್ದೇನೆ' ಎಂದು ಎಸ್‌ಐಟಿ ಮುಂದೆ ಹೇಳಿದ್ದಾನೆ ಎನ್ನಲಾಗಿದೆ. ಆದರೆ ಈ ವಿಷಯಕ್ಕೆ ಸಂಬಂಧಿಸಿದಂತೆ ಎಸ್‌ಐಟಿ ಅಥವಾ ಸರಕಾರದಿಂದ ಯಾವುದೇ ಅಧಿಕೃತ ಹೇಳಿಕೆ ಬಿಡುಗಡೆಯಾಗಿಲ್ಲ. ಅನಾಮಧೇಯ ವ್ಯಕ್ತಿ, 2014ರಲ್ಲಿ ಧರ್ಮಸ್ಥಳವನ್ನು ತೊರೆದು ತಮಿಳುನಾಡಿನಲ್ಲಿ ನೆಲೆಸಿದ್ದ. → 4

ತಿಮರೋಡಿ ವಿರುದ್ಧ ಕ್ರಮಕ್ಕೆ ಸೂಚನೆ

ಧರ್ಮಸ್ಥಳ ಪ್ರಕರಣಕ್ಕೆ ಸಂಬಂಧಿಸಿದಂತೆ ಸೌಜನ್ಯಾ ಪರ ಹೋರಾಟದಲ್ಲಿ ಮುಂಚೂಣಿಯಲ್ಲಿ ಗುರುತಿಸಿಕೊಂಡಿದ್ದ ಮಹೇಶ್ ತಿಮರೋಡಿ ಬಂಧನಕ್ಕೆ ಗೃಹ ಸಚಿವಾಲಯ ಆದೇಶ ನೀಡಿದೆ ಎಂದು ಹೇಳಲಾಗಿದೆ. ಸೌಜನ್ಯಾ ಪರ ಹೋರಾಟದಲ್ಲಿ ಗುರುತಿಸಿಕೊಂಡಿದ್ದ ಮಹೇಶ್ ಶೆಟ್ಟಿ ತಿಮರೋಡಿ ಸಾಮಾಜಿಕ ಜಾಲತಾಣದಲ್ಲಿ ನಾಲಿಗೆ ಹರಿಬಿಟ್ಟಿದ್ದು, ಬಂಧಿಸುವಂತೆ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಮಂಗಳೂರು ಪೊಲೀಸ್ ಆಯುಕ್ತರಿಗೆ ಸೂಚನೆ ನೀಡಿದ್ದಾರೆ ಎನ್ನಲಾಗಿದೆ.

ಸೊಂಪಾದ ಪುಟಗಳು

ಬುರುಡೆ ಪ್ರಕರಣದಲ್ಲಿ ಕೊನೆಗೆ ಸಿಕ್ಕಿದ್ದೇನು?
ಅಶ್ವತ್ಥಕಟ್ಟೆ ರಂಜಿತ್ ಎಚ್. ಅಶ್ವತ್ಥ 6

ಅದೇ ಭೂಮಿ, ಆಕಾಶ; ಬದುಕಿನಲ್ಲೆಷ್ಟು ವ್ಯತ್ಯಾಸ!
ವಿಶ್ವರಂಗ ರಂಗಸ್ವಾಮಿ ಮೂಕನಹಳ್ಳಿ 7

ದಾರಿದೀಪೋಕ್ತಿ

ನಾನು ಹಾರಬೇಕಾ ಬೇಡವಾ ಎಂದು ಯಾರ ಅನುಮತಿಯನ್ನೂ ಕೇಳಬೇಕಿಲ್ಲ. ರೆಕ್ಕೆ ನಿಮ್ಮದು, ಆಸೆ ನಿಮ್ಮದು. ಆಕಾಶ ವಂತೂ ಯಾರಿಗೂ ಸೇರಿದ್ದಲ್ಲ. ಹೀಗಿರುವಾಗ ಹಾರದೇ ಇರುವುದೇ ಅಪರಾಧ.

ವಕ್ರತುಂಡೋಕ್ತಿ



ನಾಳೆಯೂ ನಾನು ಸುಸ್ತಾಗಿದ್ದೇನೆ ಎಂದು ಭಾವಿಸುವುದು ನಿಜವಾದ ಆಲಸ್ಯ.

ತುಮಕೂರಿಗೆ 4 ರೈಲು ಮಾರ್ಗ: ಸೋಮಣ್ಣ

ತುಮಕೂರು: ವೇಗವಾಗಿ ಬೆಳೆಯುತ್ತಿರುವ ತುಮಕೂರು ನಗರ ಹಾಗೂ ಸುತ್ತಲಿನ ಪ್ರದೇಶ, ರೈಲು ಪ್ರಮಾಣಿಕರ ಅವಲಂಬನೆ ಹೆಚ್ಚಾಗುವ ಭವಿಷ್ಯದ ದೃಷ್ಟಿಯಿಂದ ತುಮಕೂರು- ಬೆಂಗಳೂರು ನಡುವೆ ನಾಲ್ಕು ರೈಲು ಮಾರ್ಗ ನಿರ್ಮಾಣ ಮಾಡಲು ಯೋಜನೆ ರೂಪಿಸಲಾಗುತ್ತಿದೆ. ಈ ಮೂಲಕ ಹೆಚ್ಚುವರಿ ರೈಲುಗಳ ಸೇವೆ ಒದಗಿಸಲಾ ಗುತ್ತಿದೆ ಎಂದು ಕೇಂದ್ರ ಜಲಶಕ್ತಿ ಹಾಗೂ ರೈಲ್ವೆ ಖಾತೆ ಸಹಾಯಕ ಸಚಿವ ವಿ.ಸೋಮಣ್ಣ ತಿಳಿಸಿದರು.

ಬುರುಡೆ ಪ್ರಕರಣ ಸದನದಲ್ಲಿ ಕೋಲಾಹಲ

ವಿವರಪುಟ → 5

ಎಸ್‌ಸಿ, ಎಸ್‌ಟಿ, ಒಬಿಸಿ ಮಹಿಳೆಯರಿಗೆ ಮೀಸಲು

ಸಹಕಾರ ಸಂಘದಲ್ಲಿ ಇನ್ಮುಂದೆ ಮೀಸಲು

ವಿಶ್ವವಾಣಿ ಸುದ್ದಿಮನೆ ವಿಧಾನಸಭೆ

ಬಹುನಿರೀಕ್ಷಿತ ಸಹಕಾರ ಸಂಘಗಳ ತಿದ್ದುಪಡಿ ವಿಧೇಯಕಕ್ಕೆ ಸೋಮವಾರ ಅನುಮೋದನೆ ದೊರಕಿದ್ದು, ಈ ಮೂಲಕ ಸಹಕಾರ ಸಂಘಗಳಲ್ಲಿಯೂ ಪರಿಶಿಷ್ಟ ಜಾತಿ, ಪಂಗಡ, ಹಿಂದುಳಿದ ವರ್ಗ ಹಾಗೂ ಮಹಿಳೆಯರಿಗೆ ಮೀಸಲು ದೊರೆಕಿದೆ.

ವಿಧಾನಸಭೆಯಲ್ಲಿ ಸೋಮವಾರ ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಪರವಾಗಿ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ.ಪಾಟೀಲ್ ವಿಧೇಯಕವನ್ನು ಮಂಡಿಸಿದರು.

ತಿದ್ದುಪಡಿ ವಿಧೇಯಕದಲ್ಲಿ, ಸಹಕಾರ ಸಂಘಗಳ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನಗಳಿಗೆ ಇನ್ನು ಮುಂದೆ ಅನುಸೂಚಿತ ಜಾತಿ, ಬುಡಕಟ್ಟು ಸಮುದಾಯ, ಮಹಿಳೆ ಹಾಗೂ ಹಿಂದುಳಿದವರಿಗೆ ಮೀಸಲಾತಿ ದೊರೆಯಲಿದೆ.ಇದಿಷ್ಟೇ ಅಲ್ಲದೇ, ಪ್ರತಿ ಸಹಕಾರ ಸಂಘಕ್ಕೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗದ ತಲಾ ಒಬ್ಬರನ್ನು ಸರಕಾರ ನಾಮ ನಿರ್ದೇಶನ ಮಾಡುವುದಕ್ಕೂ ಅವಕಾಶ ಮಾಡಿಕೊಳ್ಳಲಾಗಿದೆ. → 4

ಇದು ಸಹಕಾರ ರಂಗದ ಮೇಲೆ ಸರಕಾರದ ನೇರ ಹಸ್ತಕ್ಷೇಪ. ನೆಹರೂ, ಲಾಲ್ ಬಹದ್ದೂರ ಶಾಸ್ತ್ರಿ ಅವರ ಕನಸಿನ ಸಹಕಾರ ರಂಗದ ಉತ್ತೇಜನಕ್ಕೆ ಸರಕಾರ ತಿಲಾಂಜಲಿ ಇಟ್ಟಿದೆ. ಇದರ ಬದಲಾಗಿ ಸಹಕಾರ ಕ್ಷೇತ್ರವನ್ನೇ ಮುಚ್ಚಿಬಿಡಿ.
-ಜಿ.ಟಿ.ದೇವೇಗೌಡ ಜೆಡಿಎಸ್ ಶಾಸಕ

ಸರಕಾರದಿಂದ ಲೆಕ್ಕಪರಿಶೋಧನೆ ಮಾಡಿಸುವುದು, ನಿರ್ದೇಶಕರು ಪ್ರತಿ ವರ್ಷ ಆಸ್ತಿ ಘೋಷಣೆ ಮಾಡಬೇಕು ಎಂಬುದು ಅಪ್ರಾಯೋಗಿಕ. ಆದ್ದರಿಂದ ಇದನ್ನು ತಡೆಹಿಡಿದು ಅಧ್ಯಯನಕ್ಕೆ ಸಮಿತಿ ರಚಿಸಿ, ನಂತರ ಜಾರಿಗೊಳಿಸಿ.
ಆರಗ ಜ್ಞಾನೇಂದ್ರ, ಶಾಸಕ

ಅಪ್ರಾಪ್ತರಿಗೆ ನಿಶ್ಚಿತಾರ್ಥ ಮಾಡಿದರೆ ಜೈಲು

ಮತ್ತೊಂದು ಮಹತ್ವದ ಬೆಳವಣಿಗೆಯಲ್ಲಿ ಅಪ್ರಾಪ್ತ ವಯಸ್ಕರ ವಿವಾಹ ನಿಶ್ಚಿತಾರ್ಥ ನಿಷೇಧಿಸುವ ಹಾಗೂ ಈ ಅಪರಾಧಕ್ಕೆ ಎರಡು ವರ್ಷ ಕಠಿಣ ಶಿಕ್ಷೆ ಮತ್ತು ಒಂದು ಲಕ್ಷ ರುಪಾಯಿ ದಂಡ ವಿಧಿಸುವ ತಿದ್ದುಪಡಿಯನ್ನು ಬಾಲ್ಯ ವಿವಾಹ ನಿಷೇಧ ಕಾಯಿದೆ ತರಲಾಗಿದೆ. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ವಿಧೇಯಕ ಮಂಡಿಸಿ, ಬಾಲ್ಯ ವಿವಾಹ ಪಿಡುಗು ಬೇರು ಸಮೇತ ದೂರವಾಗಿಲ್ಲ ಎಂದರು.

54 ಲಕ್ಷ ಜನ್‌ಧನ್ ಖಾತೆ ನಿಷ್ಕ್ರಿಯ

ದೆಹಲಿ: ಪ್ರಧಾನಮಂತ್ರಿ ಜನ್‌ಧನ್ ಯೋಜನೆಯಡಿ ಕರ್ನಾಟಕದಲ್ಲಿ ತೆರೆಯಲಾಗಿದ್ದ ₹2.08 ಕೋಟಿ ಖಾತೆಗಳ ಪೈಕಿ 54 ಲಕ್ಷ ಖಾತೆಗಳು ನಿಷ್ಕ್ರಿಯವಾಗಿವೆ ಎಂದು ಕೇಂದ್ರ ಹಣಕಾಸು ಸಚಿವಾಲಯವು ಲೋಕಸಭೆಗೆ ಸೋಮವಾರ ತಿಳಿಸಿದೆ.

ದೇಶದಲ್ಲಿ ಜುಲೈ 31ರವರೆಗೆ ಒಟ್ಟು 56.04 ಕೋಟಿ ಜನ್‌ಧನ್ ಖಾತೆಗಳನ್ನು ತೆರೆಯಲಾಗಿದೆ. ಈ ಪೈಕಿ, ₹13.04 ಲಕ್ಷ ಖಾತೆಗಳು ನಿಷ್ಕ್ರಿಯವಾಗಿವೆ. ರಿಸರ್ವ್ ಬ್ಯಾಂಕ್ 2009ರಲ್ಲಿ ಹೊರಡಿಸಿದ ಮಾರ್ಗಸೂಚಿಗಳ ಪ್ರಕಾರ, 2 ವರ್ಷಗಳಿಗಿಂತ ಹೆಚ್ಚು ಕಾಲ ಖಾತೆಯಲ್ಲಿ ಯಾವುದೇ ವಹಿವಾಟು ನಡೆಯದಿದ್ದರೆ ಉಳಿತಾಯ ಖಾತೆಯನ್ನು ನಿಷ್ಕ್ರಿಯ ಎಂದು ಪರಿಗಣಿಸಬೇಕು ಎಂದು ಹಣಕಾಸು ಖಾತೆ ರಾಜ್ಯ ಸಚಿವ ಪಂಕಜ್ ಚೌಧರಿ ಅವರು ಸದನಕ್ಕೆ ತಿಳಿಸಿದರು. ನೇರ ನಗದು ವರ್ಗಾವಣೆಯಂತಹ ಸರಕಾರದ ವಿವಿಧ ಯೋಜನೆಗಳ ಮೊತ್ತವನ್ನು ಜನ್‌ಧನ್ ಖಾತೆ ಸೇರಿ ಬ್ಯಾಂಕ್ ಖಾತೆಗೆ ನೇರವಾಗಿ ಜಮಾ ಮಾಡಲಾಗುತ್ತದೆ. ಈ ಮೊತ್ತವನ್ನು ನಿಷ್ಕ್ರಿಯ ಖಾತೆಗಳಿಗೂ ವರ್ಗಾಯಿಸಲಾಗುತ್ತದೆ ಎಂದು ಸ್ಪಷ್ಟಪಡಿಸಿದರು. ಖಾತೆ ನಿಷ್ಕ್ರಿಯಗೊಳ್ಳುವ ಬಗ್ಗೆ ಬ್ಯಾಂಕುಗಳು ಖಾತೆದಾರರಿಗೆ ಲಿಖಿತ ಮಾಹಿತಿ ನೀಡುತ್ತವೆ ಎಂದರು.

ಆ ದಿನಗಳು

ಬೆಂಗಳೂರಿನ ಹೆಬ್ಬಾಳದಲ್ಲಿ ನಿರ್ಮಿಸಲಾದ ನೂತನ ಮೇಲ್ಸೇತುವೆಯನ್ನು ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಸಾರ್ವಜನಿಕ ಬಳಕೆಗೆ ಮುಕ್ತಗೊಳಿಸಿದರು. ಈ ವೇಳೆ ಡಿ.ಕೆ.ಶಿವಕುಮಾರ್ ಅವರು ಮೇಲ್ಸೇತುವೆಯಲ್ಲಿ ತಮ್ಮ ಹಳೆಯ ಬೈಕ್ ಓಡಿಸಿ, ಕಾಲೇಜು ದಿನಗಳನ್ನು ಮೆಲುಕು ಹಾಕಿದರು.

ದರ್ಶನ್ ಬೇರೆ ಜೈಲಿಗೆ ಶಿಫ್ಟ್ ವಿಚಾರಣೆ ಮುಂದೂಡಿಕೆ

ಬೆಂಗಳೂರು: ನಟ ದರ್ಶನ್ ಅವರನ್ನು ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಿಂದ ಬಳ್ಳಾರಿ ಕೇಂದ್ರ ಕಾರಾಗೃಹಕ್ಕೆ ಸ್ಥಳಾಂತರಿಸುವುದಕ್ಕೆ ಸಂಬಂಧಿಸಿದಂತೆ ಸಲ್ಲಿಕೆಯಾದ ಅರ್ಜಿಯ ವಿಚಾರಣೆಯನ್ನು ಸಿಸಿಎಚ್ 64ನೇ ನ್ಯಾಯಾಲಯ ಆಗಸ್ಟ್ 23ಕ್ಕೆ ಮುಂದೂಡಿತು.

'ಬೇರೆ ಕಾರಾಗೃಹಕ್ಕೆ ಸ್ಥಳಾಂತರ ಮಾಡುವುದಾದರೆ ನಮ್ಮ ವಾದವನ್ನೂ ಆಲಿಸಬೇಕು' ಎಂದು ಆಗಸ್ಟ್ 14ರಂದೇ ದರ್ಶನ್ ಪರ ವಕೀಲರು ನ್ಯಾಯಾಲಯದಲ್ಲಿ ಮನವಿ ಮಾಡಿದ್ದರು. ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಾಧೀಶರು, ದರ್ಶನ್ ಪರ ವಕೀಲರಿಗೆ ಆಕ್ಷೇಪಣೆ ಸಲ್ಲಿಸಲು ಅವಕಾಶ ನೀಡಿ ಮುಂದಿನ ವಿಚಾರಣೆಯನ್ನು ಆಗಸ್ಟ್ 23ಕ್ಕೆ ಮುಂದೂಡಿದರು.

ವಿಜಯಲಕ್ಷ್ಮಿ ಭೇಟಿ

ವಿಜಯಲಕ್ಷ್ಮಿ ಅವರು ಪರಪ್ಪನ ಅಗ್ರಹಾರ ಕಾರಾಗೃಹಕ್ಕೆ ಸೋಮವಾರ ಸಂಜೆ ಭೇಟಿ ನೀಡಿ ಪತಿ ದರ್ಶನ್ ಅವರ ಆರೋಗ್ಯ ವಿಚಾರಿಸಿದರು. ಈ ವೇಳೆ ಮುಂದಿನ ಕಾನೂನು ಹೋರಾಟದ ಬಗ್ಗೆ ದರ್ಶನ್ ಅವರೊಂದಿಗೆ ಚರ್ಚಿಸಿದರು ಎಂಬ ಮಾಹಿತಿ ಲಭ್ಯವಾಗಿದೆ.

ತಿರುಚ್ಚಿ ಶಿವ ಇಂಡಿ ವಿಪಿ ಅಭ್ಯರ್ಥಿ?

ದೆಹಲಿ: ಉಪರಾಷ್ಟ್ರಪತಿ ಚುನಾವಣೆಗೆ ಇಂಡಿಯಾ ಮೈತ್ರಿಕೂಟ ತನ್ನ ಅಭ್ಯರ್ಥಿಯನ್ನಾಗಿ, ತಮಿಳುನಾಡಿನ ಡಿಎಂಕೆ ರಾಜ್ಯಸಭಾ ಸಂಸದ ತಿರುಚಿ ಶಿವ ಅವರನ್ನು ಆಯ್ಕೆ ಮಾಡುವ ಸಾಧ್ಯತೆ ಇದೆ. ಪ್ರಾದೇಶಿಕ ರಾಜಕೀಯದಿಂದ ಎದುರಾಗುವ ಪ್ರಮುಖ ಅಡಚಣೆಯನ್ನು ನಿವಾರಿಸುವ ಕಾರ್ಯತಂತ್ರದ ನಡೆಯಾಗಿ, ಇಂಡಿಯಾ ಮೈತ್ರಿಕೂಟ, ಡಿಎಂಕೆ ಪಕ್ಷದಿಂದ ರಾಜ್ಯಸಭಾ ಸಂಸದರಾಗಿರುವ ತಿರುಚಿ ಶಿವ ಅವರನ್ನು ಉಪರಾಷ್ಟ್ರಪತಿ ಅಭ್ಯರ್ಥಿಯಾಗಿ ಆಯ್ಕೆ ಮಾಡುವ ಸಾಧ್ಯತೆಯಿದೆ. ಅಲ್ಲದೇ ಕೇವಲ ತಮಿಳುನಾಡು ಮಾತ್ರವಲ್ಲದೇ, ಸಮಸ್ತ ದಕ್ಷಿಣದ ರಾಜ್ಯಗಳ ಬೆಂಬಲವನ್ನೂ ಗಳಿಸಬಹುದು ಎಂಬುದು ಇಂಡಿಯಾ ಬ್ಲಾಕ್ ಲೆಕ್ಕಾಚಾರವಾಗಿದೆ.

ನಿರುದ್ಯೋಗದ ಪ್ರಮಾಣ ಇಳಿಕೆ



ದೆಹಲಿ: ದೇಶದಲ್ಲಿ ನಿರುದ್ಯೋಗ ದರವು ಜುಲೈನಲ್ಲಿ ಶೇ.5.2ಕ್ಕೆ ಇಳಿದಿದೆ ಎಂದು ಕೇಂದ್ರ ಸಾಂಖ್ಯಿಕ ಮತ್ತು ಯೋಜನಾ ಅನುಷ್ಠಾನ ಸಚಿವಾಲಯ ಸೋಮವಾರ ತಿಳಿಸಿದೆ. ಜೂನ್ ತಿಂಗಳಿನಲ್ಲಿ ಇದು ಶೇ.5.6ರಷ್ಟಿತ್ತು. ಪುರುಷರಲ್ಲಿ ನಿರುದ್ಯೋಗ ಪ್ರಮಾಣವು ಶೇ.5.3ರಷ್ಟಿದ್ದರೆ, ಮಹಿಳೆಯರಲ್ಲಿ ಇದು ಶೇ.5.1ರಷ್ಟು ಇದೆ. ಈ ಪೈಕಿ 15ರಿಂದ 29 ವರ್ಷದೊಳಗಿನವರ ನಿರುದ್ಯೋಗ ಪ್ರಮಾಣವು ಶೇ.15.3ರಿಂದ ಶೇ.14.9ಕ್ಕೆ ತಗ್ಗಿದೆ. ಇದು ನಗರ ಪ್ರದೇಶದಲ್ಲಿ ಶೇ.19ರಷ್ಟಿದ್ದರೆ, ಗ್ರಾಮೀಣ ಭಾಗದಲ್ಲಿ ಶೇ.13ರಷ್ಟಿದೆ. ನಗರ ಪ್ರದೇಶದಲ್ಲಿರುವ ಎಲ್ಲ ವಯೋಮಾನದವರ ನಿರುದ್ಯೋಗ ಪ್ರಮಾಣ ಜೂನ್‌ನಲ್ಲಿ ಶೇ.7.1 ಇತ್ತು. ಇದು ಜುಲೈನಲ್ಲಿ ಶೇ.7.2ಕ್ಕೆ ಏರಿಕೆಯಾಗಿದೆ ಎಂದು ತಿಳಿಸಿದೆ.

ಫನ್‌ತರಂಗ
- ರಘುಪತಿ ಶೃಂಗೇರಿ -

ದೇಶದಲ್ಲೇ ನಾನೇ ನಂ.1.. 'ಗೊತ್ತಿಲ್ಲ ಸಚಿವ' ಎಂಬ ಟ್ರೋಲ್‌ಗೆ ಗೃಹ ಮಂತ್ರಿ ತಿರುಗೇಟು
ಸುದ್ದಿ

ಏನ್ ಕೇಳಿದ್ರೂ ಗೊತ್ತಿಲ್ಲ ಅಂತಾನೆ, ನಮ್ ಮಗೂ ಮುಂದೆ ನಂ.1 ರಾಜಕಾರಣಿ ಆಗೋ ಲಕ್ಷಣ ಇದೆ ಕಣ್ರೀ!!



ಕೋಡಿಬಿದ್ದ ಕೆರೆಗಳು, ಅಣೆಕಟ್ಟೆಗಳು ಭರ್ತಿ, ರಸ್ತೆ ಸಂಪರ್ಕ ಕಡಿತ, ಜನಜೀವನ ಅಸ್ತವ್ಯಸ್ತ

ಉತ್ತರ-ದಕ್ಷಿಣದಲ್ಲಿ ವರುಣನ ಆರ್ಭಟ

ಬೆಂಗಳೂರು: ರಾಜ್ಯದ ಬಹುತೇಕ ಜಿಲ್ಲೆಗಳಲ್ಲಿ ಸೋಮವಾರ ವರುಣನ ಆರ್ಭಟ ಮುಂದುವರಿದಿದ್ದು, ಜನಜೀವನ ಅಸ್ತವ್ಯಸ್ತವಾಗಿದೆ. ತಗ್ಗುಪ್ರದೇಶಗಳು, ಜಮೀನುಗಳು ಜಲಾವೃತಗೊಂಡಿವೆ. ಹಲವೆಡೆ ಮನೆಗಳಿಗೆ ಹಾನಿಯಾಗಿದೆ. ಜಲಾಶಯಗಳಿಗೆ ಒಳಹರಿವು ಹೆಚ್ಚಿದೆ. ಮುಂಜಾಗ್ರತೆಯಾಗಿ ಜಲಾಶಯಗಳಿಂದ ಹೊರಹರಿವಿನ ಪ್ರಮಾಣ ಹೆಚ್ಚಿಸಿದ್ದು, ನದಿ ಪಾತ್ರದ ಪ್ರದೇಶಗಳಲ್ಲಿ ಆತಂಕದ ಸ್ಥಿತಿ ಮೂಡಿದೆ. ಬೆಳಗಾವಿ, ಉತ್ತರ ಕನ್ನಡ, ಧಾರವಾಡ, ಕೊಡಗು, ದಾವಣಗೆರೆ, ಚಿತ್ರದುರ್ಗ ಜಿಲ್ಲೆಯಾದ್ಯಂತ ಹಾಗೂ ಬೀದರ್ ಜಿಲ್ಲೆಯ ಔರಾದ್ ತಾಲೂಕಿನಲ್ಲಿ ಶಾಲೆ, ಕಾಲೇಜುಗಳಿಗೆ ರಜೆ ಘೋಷಿಸಲಾಗಿತ್ತು. ಕೊಡಗು, ಉಡುಪಿ, ಚಿಕ್ಕಮಗಳೂರು ಜಿಲ್ಲೆಯ ನಾಲ್ಕು ತಾಲೂಕು, ಬೆಳಗಾವಿ ಜಿಲ್ಲೆಯ 8 ತಾಲೂಕುಗಳ ವ್ಯಾಪ್ತಿಯಲ್ಲಿ ಜಿಲ್ಲಾಡಳಿತ ಮಂಗಳವಾರವೂ ರಜೆ ಘೋಷಿಸಲಾಗಿದೆ. ಬೆಳಗಾವಿ ಜಿಲ್ಲೆಯಲ್ಲಿ ರಾಜಾ ಲಖಮಗೌಡ ಜಲಾಶಯ (ಹಿಡಕಲ್) ಭರ್ತಿಯಾಗಿದ್ದು, → 4

ಎಲ್ಲೆಲ್ಲಿ ಏನೇನು ಅನಾಹುತ?

- ಬೀದರ್ ಜಿಲ್ಲೆಯ ನಂದಿ ಬಿಜಲಗಾಂವ್ ಗ್ರಾಮದಲ್ಲಿ 40ಕ್ಕೂ ಹೆಚ್ಚು ಎಮ್ಮೆಗಳು ನೀರುಪಾಲು
- ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ ದೇಗುಲದ ಕಪ್ಪೆಶಂಕರನಾರಾಯಣ ದೇಗುಲ ಮುಳುಗಡೆ
- ಸುರಿಯುತ್ತಿರುವ ಭಾರೀ ಮಳೆಗೆ ಕೊಪ್ಪಳದ ಐತಿಹಾಸಿಕ ಸ್ಮಾರಕಗಳು ಸಂಪೂರ್ಣವಾಗಿ ಜಲಾವೃತ



ಬೆಳಗಾವಿ ಜಿಲ್ಲೆಯ ಸವದತ್ತಿ ಬಳಿಯ ನವಿಲುತೀರ್ಥ ಅಣೆಕಟ್ಟಿನಿಂದ ಸೋಮವಾರ 10 ಸಾವಿರ ಕ್ಯೂಸೆಕ್ ನೀರು ಹರಿಸಲಾಯಿತು.

ಸಿಇಸಿ ವಿರುದ್ಧ ಮಹಾಭಿಯೋಗ?

ದೆಹಲಿ: ಮತಗಳ್ಳತನ ಆರೋಪದ ಮೇಲೆ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ವಿರುದ್ಧ ಸಂಸತ್ತಿನಲ್ಲಿ ಮಹಾಭಿಯೋಗ ಪ್ರಸ್ತಾವನೆ ಮಂಡಿಸಲು ರಾಜ್ಯಸಭೆಯ ಪ್ರತಿಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅಧ್ಯಕ್ಷತೆಯಲ್ಲಿ ನಡೆದ ಇಂಡಿಯಾ ಕೂಟದ ಸಭೆಯಲ್ಲಿ ನಿರ್ಧರಿಸಲಾಗಿದೆ.

ಈ ಕುರಿತು ಪ್ರತಿಕ್ರಿಯಿಸಿದ ಪ್ರತಿಪಕ್ಷದ ನಾಯಕರೊಬ್ಬರು, ಇಂಡಿಯಾ ಕೂಟದ ಎಲ್ಲ ಸದಸ್ಯರು ಈ ಪ್ರಸ್ತಾಪವನೆಗೆ ಒಪ್ಪಿಗೆ ನೀಡಿದ್ದಾರೆ. ಕಾನೂನು ವಿಧಾನಗಳ ಕುರಿತು ಶೀಘ್ರ ಚರ್ಚೆ ನಡೆಯಲಿದೆ. ಈ ಪ್ರಕ್ರಿಯೆ ನ್ಯಾಯಾಧೀಶರ ಮಹಾಭಿಯೋಗದಂತೆಯೇ ಇರಲಿದೆ ಎಂದು ಹೇಳಿದ್ದಾರೆ.

ಸಮಾಚಾರ ಸಣ್ಣದಲ್ಲ

ಶ್ರೀಕೃಷ್ಣ ವೇಷಧಾರಿ

ತುಮಕೂರು: ಶ್ರೀಕೃಷ್ಣ ಜನ್ಮಾಷ್ಟಮಿ ಪ್ರಯುಕ್ತ ನಗರದ ಕುಂದೂರು ಬಡಾವಣೆ ನಿವಾಸಿಗಳದ ಕುಮಾರ ಸ್ವಾಮಿ ಹಾಗೂ ರೇಣುಕಾ ದಂಪತಿಯ ಪುತ್ರ ಪುಟಾಣಿ ತಿಶಾಂತ್ ಬಾಲಗೋಪಾಲನ ವೇಷಧಾರಿಯಾಗಿ ಕಂಗೊಳಿಸಿದ ಬಗೆ ಇದು.

ಶ್ರೀಶನೈಶ್ಚರ ಸ್ವಾಮಿ ಶ್ರಾವಣ ಉತ್ಸವ

ತುಮಕೂರು: ನಗರದ ಗಾರ್ಡನ್ ರಸ್ತೆಯ ಶ್ರೀಶನೈಶ್ಚರ ಸ್ವಾಮಿಯ ಶ್ರಾವಣ ಮಾಸದ ಉತ್ಸವ ವಿಜೃಂಭಣೆಯಿಂದ ನೆರವೇರಿತು. ಶ್ರಾವಣ ಮಾಸದ ನಾಲ್ಕು ಶನಿವಾರಗಳಂದು ಸ್ವಾಮಿಗೆ ವಿಶೇಷ ಅಲಂಕಾರ ಪೂಜಾ ಕೈಂಕರ್ಯಗಳು ಹಾಗೂ ವಿವಿಧ ಹೋಮ, ಹವನ, ಧಾರ್ಮಿಕ ವಿಧಿ ವಿಧಾನಗಳು ನಡೆದವು. ಸ್ವಾಮಿಯ ದರ್ಶನಕ್ಕಾಗಿ ನಾಲ್ಕು ಶನಿವಾರಗಳಂದು ಸಹಸ್ರಾರು ಭಕ್ತಾದಿಗಳು ತಂಡೋಪ ತಂಡವಾಗಿ ದೇವಸ್ಥಾನಕ್ಕೆ ಆಗಮಿಸಿ ಸ್ವಾಮಿಗೆ ಪೂಜೆ, ಹರಕೆಗಳನ್ನು ತೀರಿಸುವ ಮೂಲಕ ಪುನೀತರಾದರು. ಸಹಸ್ರಾರು ಭಕ್ತರಿಗೆ ಅನ್ನ ಸಂತರ್ಪಣೆ ವ್ಯವಸ್ಥೆ ಮಾಡಲಾಗಿತ್ತು. ಮಂಗಳವಾರ ಸ್ವಾಮಿಗೆ ಹೂವಿನಿಂದ ಅಲಂಕರಿಸಲಾಗಿದ್ದ ವಾಹನದಲ್ಲಿ ಪ್ರತಿಷ್ಠಾಪಿಸಿ,ನಾದಸ್ವರ ಡೋಲ್ ವಾದ್ಯ,ವಿವಿಧ ಜಾನಪದ ಕಲಾ ತಂಡಗಳ ಪ್ರದರ್ಶನದೊಂದಿಗೆ ಅದ್ದೂರಿ ಉತ್ಸವ ನಗರದ ಪ್ರಮುಖ ಬೀದಿಗಳಲ್ಲಿ ನಡೆಯಿತು. ಉತ್ಸವವು ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿತು. ದೇವಸ್ಥಾನದ ಪ್ರಧಾನ ಅರ್ಚಕ ರಾಜಣ್ಣ ನೇತೃತ್ವದಲ್ಲಿ ನೇರವೇರಿತು.

ಮಕ್ಕಳ ಜಿಲ್ಲಾ ಪ್ರಶಸ್ತಿಗೆ ಅರ್ಜಿ ಆಹ್ವಾನ

ತುಮಕೂರು: ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಕ್ರೀಡೆ, ಕಲೆ, ಸಾಂಸ್ಕೃತಿಕ ಮತ್ತು ಸಂಗೀತ ಕ್ಷೇತ್ರಗಳಲ್ಲಿ ಅಸಾಧಾರಣ ಸಾಧನೆ ಮಾಡಿರುವ 5 ರಿಂದ 18 ವರ್ಷದೊಳಗಿನ ಮಕ್ಕಳನ್ನು ಗುರುತಿಸಿ ಪ್ರತಿ ಕ್ಷೇತ್ರದಲ್ಲಿ ಇಬ್ಬರಿಗೆ ಜಿಲ್ಲಾ ಮಟ್ಟದ ಪ್ರಶಸ್ತಿಯನ್ನು ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಪ್ರಶಸ್ತಿಯು 10,000 ರೂ.ಗಳ ನಗದು ಬಹುಮಾನ ಹಾಗೂ ಪ್ರಶಸ್ತಿ ಪತ್ರವನ್ನು ಒಳಗೊಂಡಿರುತ್ತದೆ. ಅರ್ಜಿ ಜತೆ ಮಕ್ಕಳ ವಯಸ್ಸಿನ ಪ್ರಮಾಣ ಪತ್ರವನ್ನು ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಿಸಿ ಸಲ್ಲಿಸಬೇಕು. ಪ್ರತಿಭೆ ಬಗ್ಗೆ ಪ್ರಮಾಣ ಪತ್ರಗಳನ್ನು ಲಗತ್ತಿಸಬೇಕು. ಅಂತ ರಾಷ್ಟೀಯ/ರಾಷ್ಟ್ರೀಯ/ರಾಜ್ಯ ಮಟ್ಟದಲ್ಲಿ ಭಾಗವಹಿಸಿ ಪ್ರಶಸ್ತಿ ಪಡೆದಿರುವ ಮಾಹಿತಿ ಲಗತ್ತಿಸಬೇಕು. ಸೆಪ್ಟೆಂಬರ್ 16ರೊಳಗಾಗಿ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಬಾಲಭವನ ಆವರಣ, ಎಂ.ಜಿ.ರಸ್ತೆ, ತುಮಕೂರು ಇವರಿಗೆ ಸಲ್ಲಿಸಬಹುದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಡಾ: ಎಸ್. ಸಿದ್ದರಾಮಣ್ಣ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಹಿಳೆ ಮೇಲೆ ಬೀದಿ ನಾಯಿ ದಾಳಿ

ಮಧುಗಿರಿ: ಬೀದಿ ನಾಯಿಗಳ ಹಾವಳಿ ತಾಲೂಕಿನಲ್ಲಿ ಹೆಚ್ಚಾಗುತ್ತಿದ್ದರು ಸಹ ಅಧಿಕಾರಿಗಳು ಮೌನ ವಹಿಸುತ್ತಿದ್ದಾರೆ. ದೊಡ್ಡೇರಿ ಹೋಬಳಿಯ ತಿಮ್ಮಾಪುರ ಗ್ರಾಮದ ಸುಮಲತಾ ಅವರು ಸಂಜೆ ಹೊಲದ ಬಳಿ ಹಸು ಮೇಯಿಸಿಕೊಂಡು ಬರುವಾಗ ಏಕಾಏಕಿ ನಾಯಿಯೊಂದು ಕಚ್ಚಿದ ಘಟನೆ ಸೋಮವಾರ ಸಂಜೆ ಜರುಗಿದೆ. ರೈತ ಮಹಿಳೆಯ ಮುಖ ಹಾಗೂ ಎರಡು ಕೈಗಳಿಗೆ ಕಚ್ಚಿ ದಾಳಿ ಮಾಡಿದ್ದು ಹಾಗೇ ಗ್ರಾಮದ ಹನುಮಂತರಾಯಪ್ಪ ಎಂಬುವರನ್ನು ಸಹ ಕಡಿಯಲು ಮುಂದಾದಾಗ ಜಾಗರೂಕರಾಗಿ ನಾಯಿಯನ್ನು ಓಡಿಸಿದ್ದಾರೆ ಎಂದು ಗ್ರಾಮದ ನಯನ ತಿಳಿಸಿದರು. ಗ್ರಾಮೀಣ ಪ್ರದೇಶಗಳಲ್ಲಿ ಸಾಕು ನಾಯಿಗಳು ಹಾಗೂ ವನ್ಯಜೀವಿಗಳ ಕಾಟ ಹೆಚ್ಚಾಗಿದ್ದು ನಮ್ಮ ತಿಮ್ಮಾಪುರ ಗ್ರಾಮವು ಅರಣ್ಯ ಪ್ರದೇಶಕ್ಕೆ ಹೊಂದಿಕೊಂಡಿದೆ ಅಧಿಕಾರಿಗಳು ಇತ್ತ ಗಮನ ಹರಿಸಬೇಕಿದೆ ಎಂದು ಗಾಯಗೊಂಡ ಪತಿ ಪ್ರಸನ್ನಕುಮಾರ್ ಒತ್ತಾಯಿಸಿದ್ದಾರೆ. ತಿಮ್ಮಾಪುರ ಗ್ರಾಮದ ಪಕ್ಕದ ಕವಣದಾಲ ಸಾರ್ವಜನಿಕ ಆಸ್ಪತ್ರೆ ಇದ್ದರೂ ಸಹ ಅಲ್ಲಿ ಚಿಕಿತ್ಸೆ ದೊರೆತಿಲ್ಲ. ಮಧುಗಿರಿ ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿದ್ದಾರೆ.

ಶಾಸಕರಿಗೆ ಮನವಿ ಸಲ್ಲಿಸಲು ಆಗಮಿಸಿದ ವೇಳೆ ಪೊಲೀಸರ ಜತೆ ಮಾತಿನ ಚಕಮಕಿ

ಒಳ ಮೀಸಲಿಗೆ ತಮಟೆ ಚಳವಳಿ

ಚಿಕ್ಕಬಳ್ಳಾಪುರ: ಒಳ ಮೀಸಲು ಹೋರಾಟಗಾರರನ್ನು ತಾಲೂಕು ಕಚೇರಿ ಒಳಗೆ ಬಿಡದೆ ಪ್ರವೇಶ ದ್ವಾರದಲ್ಲೇ ತಡೆದ ಕಾರಣ ಪೊಲೀಸರು ಮತ್ತು ಹೋರಾಟಗಾರರ ನಡುವೆ ಅರ್ಧ ಗಂಟೆಗೂ ಹೆಚ್ಚು ಕಾಲ ಸುರಿವ ಮಳೆಯ ನಡುವೆ ಬಿರುಸಿನ ಮಾತಿನ ಚಕ್ಕಮಕಿ ನಡೆದ ಘಟನೆ ಚಿಕ್ಕಬಳ್ಳಾಪುರದಲ್ಲಿ ನಡೆಯಿತು.

ನಗರದ ಅಂಬೇಡ್ಕರ್ ಭವನದಿಂದ ತಾಲೂಕು ಕಚೇರಿವರೆಗೆ ತಮಟೆ ಚಳವಳಿ ಮೆರವಣಿಗೆ ನಡೆಸಿದ ಕರ್ನಾಟಕ ಮಾದಿಗ ಮಹಾಸಭಾ ದಲಿತ ಸಂಘಟನೆಗಳ ಒಕ್ಕೂಟದ ಸದಸ್ಯರು ಶಾಸಕರ ಕಚೇರಿಗೆ ತೆರಳಿ ಮನವಿ ಸಲ್ಲಿಸಲು ಮುಂದಾದರು.

ಹೋರಾಟಗಾರರನ್ನು ತಾಲೂಕು ಕಚೇರಿ ಗೇಟಿನ ಬಳಿಯೇ ತಡೆದ ಪೊಲೀಸರ ಕ್ರಮವನ್ನು ಪ್ರಶ್ನಿಸಿದ ಹೋರಾಟಗಾರರು ನಮ್ಮ ನ್ಯಾಯಯುತ ಹಕ್ಕುಗಳನ್ನು ಪಡೆಯಲು ಸರಕಾರಿ ಕಚೇರಿಗೆ ಬಂದರೆ ಬಿಡದೆ ತಡೆಯುವುದು ತರವಲ್ಲ.ಕಾಂಗ್ರೆಸ್ ಸರಕಾರದ ಅವಧಿಯಲ್ಲಿ ಹೋರಾಟ ಮಾಡುವುದೂ ಕೂಡ ಅಪರಾಧವಾಗಿದೆ. ಕಾಂಗ್ರೆಸ್ ಸರಕಾರಕ್ಕೆ ಧಿಕ್ಕಾರ, ಸಮಾಜಕಲ್ಯಾಣ ಇಲಾಖೆ ಸಚಿವರಿಗೆ ಧಿಕ್ಕಾರ, ಪೊಲೀಸ್ ವ್ಯವಸ್ಥೆಗೆ ಧಿಕ್ಕಾರ, ಪ್ರವೇಶ ನಿರಾಕರಿಸಿದ ತಹಸೀಲ್ದಾರ್‌ಗೆ ಧಿಕ್ಕಾರ ಎಂದು ಘೋಷಣೆಗಳನ್ನು ಮೊಳಗಿಸಿದರು.

ಈ ವೇಳೆ ಹೋರಾಟಗಾರರು ಮತ್ತು ಸರ್ಕಲ್ ಇನ್ಸ್ಪೆಕ್ಟರ್ ಮಂಜುನಾಥ್,ಗ್ರಾಮಾಂತರ ಎಸ್‌ಐ ಇನ್ಸ್ಪೆಕ್ಟರ್ ಶರಣಪ್ಪ, ನಗರ ಠಾಣೆ ಎಸ್ಸೈ ಅಮರ್ ಮೋಗ್ಲಿ ನಡುವೆ ಬಿರುಸಿನ ಮಾತುಕತೆ ನಡೆಯಿತು. ಗೇಟಿನ ಹೊರಗಡೆ ಮನವಿ ಸ್ವೀಕರಿಸಲು ಬಂದ ಶಾಸಕರ ಆಪ್ತ ಕಾರ್ಯದರ್ಶಿಗೆ ಮನವಿ ಪತ್ರ ನೀಡಲು ನಿರಾಕರಿಸಿದ ಹೋರಾಟಗಾರರು ಸ್ಥಳಕ್ಕೆ ತಹಸೀಲ್ದಾರ್ ಬರಲೇಬೇಕು ಎಂದು ಪಟ್ಟು ಹಿಡಿದರು.

ಒಳ ಮೀಸಲು ಹೋರಾಟಗಾರರನ್ನು ತಾಲೂಕು ಕಚೇರಿ ಒಳಗೆ ಬಿಡದೆ ಪ್ರವೇಶ ದ್ವಾರದಲ್ಲೇ ತಡೆದ ಕಾರಣ ಪೊಲೀಸರ ಜತೆ ಮಾತಿನ ಚಕ್ಕಮಕಿ ನಡೆಯಿತು.

ಈ ಎಲ್ಲಾ ನಾಟಕೀಯ ಬೆಳವಣಿಗೆಗಳ ನಂತರ ಹೋರಾಟಕ್ಕೆ ಮಣಿದ ಪೊಲೀಸ್ ಮತ್ತು ಕಂದಾಯ ಇಲಾಖೆ ಹೋರಾಟಗಾರರನ್ನು ತಾಲೂಕ್ ಕಚೇರಿ ಆವರಣಕ್ಕೆ ಬಿಡಲಾಯಿತು. ನಂತರ ನಡೆದ ತಮಟೆ ಚಳವಳಿಯಲ್ಲಿ ಮಾತನಾಡಿದ ದಲಿತ ಮುಖಂಡ ಬಾಲಕುಂಟಹಳ್ಳಿ ಗಂಗಾಧರ್ 30 ವರ್ಷಗಳ ಮಾದಿಗ ಸಮುದಾಯದ ಮೀಸಲಾತಿಯಲ್ಲಿ ತಮ್ಮ ಪಾಲನ್ನು ಪಡೆಯಲು ಹಕ್ಕುತ್ತಾ ಮಾಡುತ್ತಾ ಬರಲಾಗಿದೆ.ಇದಕ್ಕಾಗಿ ತ್ಯಾಗ ಬಲಿದಾನವನ್ನು ಸಮುದಾಯ ನೀಡಿದೆ.ನಾಗಮೋಹನ್ ದಾಸ್ ಸಮಿತಿ ವರದಿಯನ್ನು ಸರಕಾರಕ್ಕೆ ಸಲ್ಲಿಸಿದೆ.ಸರಕಾರ ಇದನ್ನು ಅಂಗೀಕರಿಸಿ ಒಳಮೀಸಲಾತಿ ಜಾರಿ ಮಾಡಲೇ ಬೇಕು ಎಂದು ಒತ್ತಾಯಿಸಿದರು.

ಈ ಸಂಬಂಧ ಚಿಕ್ಕಬಳ್ಳಾಪುರ ಶಾಸಕ ಪ್ರದೀಪ್ ಈಶ್ವರ್ ಅವರಿಗೆ ಮನವಿ ಪತ್ರವನ್ನು ನೀಡಿ ನಮ್ಮ ಪರವಾಗಿ ಸದನದಲ್ಲಿ ಮಾತನಾಡುವಂತೆ ಆಗ್ರಹಿಸಲು ಬಂದಿದ್ದೇವೆ. ಆದರೆ ಪೊಲೀಸರು ದರ್ಪ ದೌರ್ಜನ್ಯ ತೋರಿ ನಮ್ಮನ್ನು ಗೇಟಿನಲ್ಲಿಯೇ ತಡೆ ತಡೆಯುತ್ತಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮಾದಿಗ ದಂಡೋರ ಜಿಲ್ಲಾಧ್ಯಕ್ಷ ಸುರೇಶ್, ಹಿರಿಯ ಹೋರಾಟಗಾರ ಮುನಿಕೃಷ್ಣಪ್ಪ ಮಾತನಾಡಿದರು.ಈ ವೇಳೆ ಮುನಿಕೃಷ್ಣಪ್ಪ ಬಿಎನ್ ಗಂಗಾಧರಪ್ಪ ಎಂ ವೇಣು ಮಂಜು ತುಳಸಿ ಗಾಯತ್ರಿ ಸುರೇಶ್ ಮುನಿರಾಜು ನಾಗೇಶ್ ಮತ್ತಿತರು ಇದ್ದರು.

ಹಾಸ್ಟೆಲ್‌ಗಳ ಹೊರಗುತ್ತಿಗೆ ನೌಕರರಿಂದ ಪ್ರತಿಭಟನೆ

ತುಮಕೂರು: ಸರಕಾರಿ ಹಾಸ್ಟೆಲ್‌ಗಳಲ್ಲಿ ಕೆಲಸ ಮಾಡುವ ಹೊರಗುತ್ತಿಗೆ ನೌಕರರಿಗೆ ಕನಿಷ್ಠ ವೇತನ ಜಾರಿಗೆ ತರಬೇಕು ಎಂಬ ಬೇಡಿಕೆಗಳನ್ನು ಈಡೇರಿಸಲು ಒತ್ತಾಯಿಸಿ, ಕರ್ನಾಟಕ ರಾಜ್ಯ ಸರಕಾರಿ ಹಾಸ್ಟೆಲ್ ಮತ್ತು ವಸತಿ ಶಾಲಾ ಹೊರಗುತ್ತಿಗೆ ನೌಕರರ ಸಂಘದ ಜಿಲ್ಲಾ ಸಮಿತಿ ವತಿಯಿಂದ ಡಿಸಿ ಕಚೇರಿ ಎದುರು ಪ್ರತಿಭಟನೆ ನಡೆಸಿ ಮನವಿ ಸಲ್ಲಿಸಲಾಯಿತು.

ನಂತರ ಹಾಸ್ಟಲ್ ನೌಕರರನ್ನು ಉದ್ದೇಶಿಸಿ ಮಾತನಾಡಿದ ಜಿಲ್ಲಾಧ್ಯಕ್ಷ ರವಿಕುಮಾರ್, ಸಮಾಜ ಕಲ್ಯಾಣ ಇಲಾಖೆ. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಇಲಾಖೆ ಹಾಗೂ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಹಾಸ್ಟೆಲ್ ಮತ್ತು ವಸತಿ ನಿಲಯಗಳಲ್ಲಿ ಸುಮಾರು 20 ವರ್ಷಗಳಿಂದ ಯಾವುದೇ ಸೇವಾ ಭದ್ರತೆ ಇಲ್ಲದೇ ದಿನದ 14 ಗಂಟೆ ಕೆಲಸ ಮಾಡುತ್ತಿರುವ ಅಡುಗೆಯವರು,ಅಡುಗೆ ಸಹಾಯಕರು, ಸ್ವಚ್ಛತಾಗಾರರು, ಕಾವಲುಗಾರು, ಅಟೆಂಡರ್, ಡಿ.ಗ್ರೂಪ್ ಹೊರಗುತ್ತಿಗೆ ಸಿಬ್ಬಂದಿಗಳು ಕೆಲಸ ಮಾಡುತ್ತಿದ್ದಾರೆ.ಅವರಿಗೆ ಸೇವಾ ಭದ್ರತೆಯಿಲ್ಲ ಎಂದರು.

ಒಬ್ಬ ನೌಕರನಿಗೆ 10.500 ರೂ.ಗಳಿಂದ 14,500 ರೂ.ಲಭಿಸುತ್ತಿವೆ. ಆದರೆ ಏಜೆನ್ಸಿಯವರಿಗೆ ಒಬ್ಬ ವ್ಯಕ್ತಿಗೆ 18 ಸಾವಿರ ರೂ.ಗೆ ಪಾವತಿಸಲಾಗುತ್ತಿದೆ.ಇ.ಎಸ್.ಐ, ಪಿ.ಎಫ್ ಬಗ್ಗೆ ಯಾವುದೇ ಮಾಹಿತಿ ಇಲ್ಲ. ಅತ್ಯಂತ ಕಷ್ಟದಿಂದ ದುಡಿಯುತ್ತಿದ್ದಾರೆ. ಇಎಸ್‌ಐಗೆ ಸರಿಯಾಗಿ ಪಾವತಿಯಾಗದೆ, ಆಸ್ಪತ್ರೆಗಳಲ್ಲಿ ಸಮರ್ಪಕ ಚಿಕಿತ್ಸೆಯೂ ದೊರೆಯುತ್ತಿಲ್ಲ ಎಂದು ದೂರಿದರು.

ಜಿಲ್ಲಾಧಿಕಾರಿಗಳ ಕಚೇರಿ ಅಧೀಕ್ಷಕರಿಗೆ ಸಲ್ಲಿಸಲಾಯಿತು.ಪ್ರತಿಭಟನೆಯಲ್ಲಿ ಜಿಲ್ಲಾ ಮುಖಂಡರಾದ ಶಿವಣ್ಣ, ಗೋವಿಂದರಾಜು, ಶಂಕರ್, ಕುಮಾರ್, ರವಿಕುಮಾರ್.ಟಿ.ಎನ್., ಚಂದ್ರಕಲಾ, ಪ್ರಭ, ನರಸಿಂಹಮೂರ್ತಿ ಮತ್ತಿತರರು ಪಾಲ್ಗೊಂಡಿದ್ದರು.



ನಗರದ ಡಿಸಿ ಕಚೇರಿ ಎದುರು ಪ್ರತಿಭಟನೆ ನಡೆಸಿ ಮನವಿ ಸಲ್ಲಿಸಲಾಯಿತು.

ಹಳ್ಳಕ್ಕೆ ಬಿದ್ದ ಶಾಲಾ ವಾಹನ

ಚಿಕ್ಕಬಳ್ಳಾಪುರ: ತಾಲೂಕಿನ ಮಂಡಿಕಲ್ಲು ಗ್ರಾಮದ ಎಂ ರಾಮಯ್ಯ ಶಾಲೆಗೆ ಸೇರಿದ ಶಾಲಾ ವಾಹನ ಬೈಕ್ ತಪ್ಪಿಸಲು ಹೋಗಿ ಬಸ್ ಹಳ್ಳಕ್ಕೆ ಬಿದ್ದಿರುವ ದುರ್ಘಟನೆ ನಡೆದಿದೆ. ಗುಡಿಬಂಡೆ ತಾಲೂಕು ಮ್ಯಾಕಲಹಳ್ಳಿ ಸೀತಪಲ್ಲಿ ಮಾರ್ಗ ಮಧ್ಯೆ ಈ ಘಟನೆ ನಡೆದಿದ್ದು ಎದುರಿಗೆ ಬಂದ ಬೈಕ್ ಡಿಕ್ಕಿ ತಪ್ಪಿಸಲು ಹೋಗಿ ಶಾಲಾ ವಾಹನ ಪಲ್ಟಿಯಾಗಿದೆ.

ಬಸ್‌ನಲ್ಲಿದ್ದ 17 ಮಕ್ಕಳಿಗೂ ಸಣ್ಣ ಪುಟ್ಟ ಗಾಯಗಳಾಗಿದ್ದು ಎಲ್ಲರನ್ನೂ ಗುಡಿಬಂಡೆ ಸರಕಾರಿ ಆಸ್ಪತ್ರೆಗೆ ಸೇರಿಸಿ ಚಿಕಿತ್ಸೆ ನೀಡಲಾಗಿದೆ. ಈ ಘಟನೆ ನಡೆಯುತ್ತಿದ್ದಂತೆ ಗುಡಿಬಂಡೆ ಪಟ್ಟಣದ ಸರಕಾರಿ ಆಸ್ಪತ್ರೆಯ ಆಂಬುಲೆನ್ಸ್‌ಗೆ ಕರೆ ಮಾಡಿ ತಿಳಿಸಿದರೂ ಆಪತ್ತಿನ ಕಾಲಕ್ಕೆ ಬರದೆ ನಿರ್ಲಕ್ಷ್ಯ ವಹಿಸಿದ್ದಾರೆ ಎಂದು ಸ್ಥಳದಲ್ಲಿದ್ದ ಸಾರ್ವಜನಿಕರು ದೂರಿದ್ದಾರೆ .

ಆಂಬುಲೆನ್ಸ್ ಸಕಾಲಕ್ಕೆ ಬಾರದೆ ನರಳುತ್ತಿದ್ದ ವಿದ್ಯಾರ್ಥಿಗಳ ನೆರವಿಗೆ ಧಾವಿಸಿದ ಸಾರ್ವಜನಿಕರು ತಮ್ಮ ವಾಹನಗಳಲ್ಲಿಯೇ ಮಕ್ಕಳನ್ನು ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಿ ಮಾನವೀಯತೆ ಮೆರೆದಿದ್ದಾರೆ. ಸ್ಥಳೀಯ ಸಾರ್ವಜನಿಕರು ಜಮಾಯಿಸಿ ಮಕ್ಕಳನ್ನು ವಾಹನದಿಂದ ಹೊರ ತೆಗೆದು ಆಸ್ಪತ್ರೆಗೆ ಸಾಗಿಸಲು ನೆರವಾಗಿ ಮಾನವೀಯತೆ ಮೆರೆದಿದ್ದಾರೆ. ಘಟನೆ ತಿಳಿದ ಕೂಡಲೇ ಎಂ ರಾಮಯ್ಯ ಶಾಲೆ ಮುಖ್ಯಶಿಕ್ಷಕರು ಸ್ಥಳಕ್ಕೆ ಆಗಮಿಸಿ ಮಕ್ಕಳ ನೆರವಿಗೆ ದಾವಿಸಿ ಘಟನೆಯ ಬಗ್ಗೆ ಚಾಲಕನಿಂದ ಮಾಹಿತಿಯನ್ನು ಕಲೆಹಾಕಿದ್ದಾರೆ.

ಪಕ್ಷ ಸಂಘಟನೆಗೆ ಎಲ್ಲರೂ ಒಟ್ಟಾಗಿ: ಸೌಮ್ಯರೆಡ್ಡಿ

ಮಂಡ್ಯ: ಎಲ್ಲರೂ ಒಟ್ಟಾಗಿ ಕೆಲಸ ಮಾಡಿದರೆ ಮಾತ್ರ ಸಂಘಟನೆ ಮಾಡಲು ಸಾಧ್ಯ. ಈ ನಿಟ್ಟಿನಲ್ಲಿ ಕಾಂಗ್ರೆಸ್‌ನ ಎಲ್ಲ ಘಟಕಗಳೂ ಒಂದಾಗಿ ಕೆಲಸ ಮಾಡಬೇಕು ಎಂದು ಕೆಪಿಸಿಸಿ ಮಹಿಳಾ ಕಾಂಗ್ರೆಸ್ ರಾಜ್ಯಾಧ್ಯಕ್ಷೆ ಸೌಮ್ಯರೆಡ್ಡಿ ತಿಳಿಸಿದರು.

ಮಂಡ್ಯ ಜಿಲ್ಲಾ ಮಹಿಳಾ ಕಾಂಗ್ರೆಸ್ ಸಮಿತಿ ವತಿಯಿಂದ ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ನಡೆದ ಜಿಲ್ಲಾ ಕಾಂಗ್ರೆಸ್ ಮಹಿಳಾಧ್ಯಕ್ಷೆಯಾಗಿ ನೇಮಕಗೊಂಡ ಎಚ್.ಬಿ.ಶುಭದಾಯಿನಿ ಅಧಿಕಾರ ಸ್ವೀಕಾರ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಕಾಂಗ್ರೆಸ್, ಯುವ ಕಾಂಗ್ರೆಸ್, ಮಹಿಳಾ ಕಾಂಗ್ರೆಸ್ ಸೇರಿದಂತೆ ಎಲ್ಲ ಘಟಕಗಳೂ ಒಟ್ಟಾಗಿ ಕೆಲಸ ಮಾಡಿ ಪಕ್ಷವನ್ನು ಮುಂದೆಯೂ ಅಧಿಕಾರದಲ್ಲಿರುವಂತೆ ನೋಡಿಕೊಳ್ಳುವುದು ನಮ್ಮ ಜವಾಬ್ದಾರಿಯಾಗಿದೆ ಎಂದರು.

ವಿಧಾನ ಪರಿಷತ್ ಸದಸ್ಯ ದಿನೇಶ್ ಗೂಳೀಗೌಡ ಮಾತನಾಡಿ, ಕಾಂಗ್ರೆಸ್ ಪಕ್ಷ ಮಹಿಳೆಯರಿಗೆ ಹೆಚ್ಚಿನ ಪ್ರಾಧಾನ್ಯತೆ ನೀಡಿರುವುದನ್ನು ಇತಿಹಾಸ ಪುಟಗಳಲ್ಲಿ ನೋಡಬಹುದಾಗಿದೆ. ನೆಹರು ಅವರು 17 ವರ್ಷಗಳ ಕಾಲ ಆಳಿದರೆ, ಅವರ ಪುತ್ರಿ ಇಂದಿರಾಗಾಂಧಿ 16 ವರ್ಷಗಳ ಕಾಲ ದೇಶ ಮುನ್ನಡೆಸಿದರು ಎಂದರು.

ಮಂಡ್ಯ ಜಿಲ್ಲಾ ಕಾಂಗ್ರೆಸ್ ಮಹಿಳಾಧ್ಯಕ್ಷೆಯಾಗಿ ಎಚ್.ಬಿ.ಶುಭದಾಯಿನಿ ಅಧಿಕಾರ ಸ್ವೀಕರಿಸಿದರು. ಕೆಪಿಸಿಸಿ ಮಹಿಳಾ ಕಾಂಗ್ರೆಸ್ ರಾಜ್ಯಾಧ್ಯಕ್ಷೆ ಸೌಮ್ಯರೆಡ್ಡಿ , ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಇತರರು ಇದ್ದರು.

ಮಹಿಳೆಯರಿಗೆ ಹೆಚ್ಚಿನ ಅವಕಾಶ ನೀಡಿದ ಯಾವುದಾದರೂ ಪಕ್ಷ ಎಂದರೆ ಅದು ಕಾಂಗ್ರೆಸ್‌ನಿಂದ ಮಾತ್ರ ಸಾಧ್ಯ. ವಿರೋಧ ಪಕ್ಷದ ನಾಯಕರಾಗಿದ್ದ ವಾಜಪೇಯಿ ಅವರು ಇಂದಿರಾಗಾಂಧಿ ಅವರ ಆಡಳಿತ ನೋಡಿ ಉಕ್ಕಿನ ಮಹಿಳೆ ಎಂದು ಬಿರುದು ನೀಡಿದ್ದರು. ಲೋಕಸಭಾ ಸ್ಪೀಕರ್ ಸ್ಥಾನಕ್ಕೆ ಮೊದಲ ಬಾರಿಗೆ ಮಹಿಳೆಯರನ್ನು ಆಯ್ಕೆ ಮಾಡಿದ್ದೂ ಸಹ ಕಾಂಗ್ರೆಸ್ ಪಕ್ಷ ಎಂದು ವಿವರಿಸಿದರು.

ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಸಮಾರಂಭ ಉದ್ಘಾಟಿಸಿ ಮಾತನಾಡಿದರು. ನೂತನ ಅಧ್ಯಕ್ಷರಾಗಿ ನೇಮಕಗೊಂಡ ಎಚ್.ಬಿ.ಶುಭದಾಯಿನಿ ಅಕಾರ ಸ್ವೀಕರಿಸಿದರು. ವೇದಿಕೆಯಲ್ಲಿ ಶಾಸಕ ಪಿ. ರವಿಕುಮಾರ್ ಗಣಿಗ, ಮುಖಂಡರಾದ ಎಂ.ಎಸ್. ಚಿದಂಬರ್, ಅಂಜನಾ ಶ್ರೀಕಾಂತ್ ಇದ್ದರು.

ಡೋರ್ ಡೆಲಿವರಿ ಯುಗ, ಹೆಚ್ಚಲಿ ವೈಶ್ಯರ ವೇಗ

ಕೋಲಾರ: ಹುಟ್ಟಿದ ಊರು, ಸಮಾಜ, ಕುಲಕಸುಬಿನ ಕುರಿತು ಕೀಳರಿಮೆ ಬಿಟ್ಟು ಜೀವನದಲ್ಲಿ ಸಾಧನೆ ಮಾಡಬೇಕೆಂದು ಬೆಂಗಳೂರು ಡಿಸಿಪಿ ಡಿ.ದೇವರಾಜ್ ಹೇಳಿದರು.

ಆರ್ಯವೈಶ್ಯ ಮಂಡಳಿ, ವಾಸವಿ ಮಹಿಳಾ ಮಂಡಳಿ, ವಾಸವಿ ಯುವಜನ ಸಂಘದಿಂದ ನಗರದ ರಂಗ ಮಂದಿರದಲ್ಲಿ ನಡೆದ ವಾಸವಿ ಜಯಂತಿ ಸಮಾರೋಪ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಮನೆ ಬಾಗಿಲಿಗೆ ಡೆಲಿವರಿ ಬಂದು ನಿಂತಿರುವಾಗ ಶೆಟ್ಟರು ವ್ಯಾಪಾರದ ಸಲುವಾಗಿ ಕಾಲ ಚಕ್ರದ ಜೊತೆಗೆ ಓಡಲು ಮುಂದಾಗಬೇಕೆಂದರು. ಶೆಟ್ಟರು ವ್ಯಾಪಾರದ ಜೊತೆಗೆ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಬೇಕು. ಪೋಷಕರು ಮಕ್ಕಳಿಗೆ ಆಸ್ತಿ ಅಂತಸ್ತು ಮಾಡುವುದಕ್ಕಿಂತ ವಿದ್ಯಾಭ್ಯಾಸ ಕೊಡಿಸಿದರೆ ಜೀವನ ಪರ್ಯಂತ ನೆಮ್ಮದಿಯ ಬದುಕು ಕಾಣುತ್ತಾರೆ ಎಂದು ತಿಳಿಸಿದರು. ಸುಗಟೂರಿನ ಧರಣಿಶೆಟ್ಟಿ ಅವರು ಇದೀಗ ಯುಪಿಎಸ್ಸಿ ಸೆಲೆಕ್ಟ್ ಆಗಲಿಲ್ಲವಾದರೂ ಭವಿಷ್ಯದಲ್ಲಿ ತೇರ್ಗಡೆಯಾಗುವ ಮೂಲಕ ಕೋಲಾರ ಜಿಲ್ಲೆಗೆ ಹೆಸರು ತರುತ್ತಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಕೋಲಾರದಲ್ಲಿ ಹುಟ್ಟಿ ಬೆಳೆದ ನಾನು ಸಮಾಜಕ್ಕೆ ಏನಾದರೂ ಮಾಡಬೇಕು ಎಂದು ತೀರ್ಮಾನ ಮಾಡಿ ತಂದೆ-ತಾಯಿ ಹೆಸರಿನಲ್ಲಿ ಡಿಎಂಆರ್ ಇನ್‌ಸ್ಟ್ಯೂಟ್ ಪ್ರಾರಂಭಿಸಿ ವಿದ್ಯಾರ್ಥಿಗಳಿಗೆ ಉಚಿತವಾಗಿ ಯುಪಿಎಸ್ಸಿ ತರಬೇತಿ ಕೊಡಿಸುತ್ತಿರುವುದಾಗಿ ಡಿಸಿಪಿ ದೇವರಾಜ್ ನುಡಿದರು. ಆರ್ಯವೈಶ್ಯ ಮಹಾಸಭಾ ರಾಜ್ಯ ನಿರ್ದೇಶಕ ಎನ್.ಸಿ.ಸತೀಶ್ ಮಾತನಾಡಿ, ರಾಜ್ಯದಲ್ಲಿ 2000 ವಿದ್ಯಾರ್ಥಿಗಳಿಗೆ ಸ್ಕಾಲರ್ ಶಿಪ್ , 300 ಮಕ್ಕಳಿಗೆ ಲ್ಯಾಪ್‌ಟಾಪ್ ನೀಡಲಾಗಿದೆ ಎಂದು ಮಾಹಿತಿ ನೀಡಿದರು. ಆರ್ಯವೈಶ್ಯ ಮಂಡಳಿ ಕಾರ್ಯದರ್ಶಿ ಬಿ.ಎಸ್.ಮಂಜುನಾಥ್ ,ಮುಖಂಡರಾದ ಬಿ.ಎಸ್.ಗೋವಿಂದರಾಜು ಇದ್ದರು.

ಕೋಲಾರದ ವಾಸವಿ ಜಯಂತಿ ಸಮಾರೋಪದಲ್ಲಿ ಪ್ರತಿಭಾ ಪುರಸ್ಕಾರ ನಡೆಯಿತು.

ಬೇಡಿಕೆ ಈಡೇರಿಕೆಗೆ ಗುತ್ತಿಗೆ ನೌಕರರ ಆಗ್ರಹ

ಚಿಕ್ಕಬಳ್ಳಾಪುರ: ಜಿಲ್ಲೆಯ ವಿದ್ಯಾರ್ಥಿನಿಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರ ಸಮಸ್ಯೆಗಳನ್ನು ಪರಿಹರಿಸುವ ಜೊತೆಗೆ ಅವರ ಬೇಡಿಕೆ ಈಡೇರಿಸಲು ಒತ್ತಾಯಿಸಿ ರಾಜ್ಯ ಹಾಸ್ಟೆಲ್ ಹಾಗೂ ವಸತಿ ಶಾಲೆ ಹೊರಗುತ್ತಿಗೆ ನೌಕರರ ಸಂಘದಿಂದ ಸೋಮವಾರ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಲಾಯಿತು.

ಜಿಲ್ಲೆಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ. ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಇಲಾಖೆ ಹಾಗೂ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಹಾಸ್ಟೆಲ್‌ಗಳಲ್ಲಿ ಕೆಲಸ ಮಾಡುವ ಅಡುಗೆಯವರು, ಅಡುಗೆ ಸಹಾಯಕರು, ಸ್ವಚ್ಛತಾಗಾರರ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಲಾಯಿತು.

ಕನಿಷ್ಠ ವೇತನ ಜಾರಿಯಾಗದೆ ಹಾಸ್ಟೆಲ್ ನೌಕರರ ಜೀವನ ಅತಂತ್ರ ಸ್ಥಿತಿಯಲ್ಲಿದೆ. ಕಾರ್ಮಿಕ ಇಲಾಖೆ ಕನಿಷ್ಠ ವೇತನ ಜಾರಿ ಮಾಡಿ, ಕರಡು ವರದಿ ಈಗಾಗಲೇ ನೀಡಿದ್ದು, ಏ.1 ರಿಂದ ಕರಡು ವರದಿ ಜಾರಿ ಮಾಡುವುದಾಗಿ ಹೇಳಲಾಗಿತ್ತು. ಆದರೆ ಈವರೆಗೂ ಸರ್ಕಾರ ಯಾವುದೇ ಕ್ರಮ ಕೈಗೊಂಡಿಲ್ಲ, ಸಮಾನ ಕೆಲಸಕ್ಕಾಗಿ ಕೆಲಸ ಮಾಡುತ್ತಿರುವ ಖಾಯಂ ನೌಕರರಿಗೆ 35 ರಿಂದ 40 ಸಾವಿರ ವೇತನ ನೀಡಲಾಗುತ್ತಿದೆ. ಅದೇ ಕೆಲಸ ಮಾಡುತ್ತಿರುವ ಗುತ್ತಿಗೆ ಆಧಾರದ ನೌಕರರಿಗೆ ಕೇವಲ 12 ರಿಂದ 13 ಸಾವಿರ ಮಾತ್ರ ನೀಡಲಾಗುತ್ತಿದೆ ಈ ತಾರತಮ್ಯ ಯಾಕೆ ಎಂದು ಅವರು ಪ್ರಶ್ನಿಸಿದರು.

ಸಂಘದ ಕೆ.ಮುನಿಯಪ್ಪ, ಬಿ.ಎನ್.ಮುನಿಕೃಷ್ಣಪ್ಪ, ನರಸಿಂಹಮೂರ್ತಿ, ಭಾಗ್ಯಮ್ಮ, ಶಶಿಕಲಾ, ಅಮರಾವತಿ, ಮಂಜುನಾಥ್, ಪ್ರಸನ್ನಕುಮಾರ್, ರಾಮಪ್ಪ, ವೆಂಕಟರವಣಪ್ಪ, ಪ್ರಮೀಳಾ ಇದ್ದರು.

ಅಧಿಕ ಸಿವಿಲ್ ಜಡ್ಜ್ ಮತ್ತು ಜೆ.ಎಂ. ಎಫ್.ಸಿ. ರವರ ನ್ಯಾಯಾಲಯ, ಮಧುಗಿರಿ

ಸಿ.ಮಿಸ್.ಸಂಖ್ಯೆ: 231/2025

ಅರ್ಜಿದಾರರು:-1.ನಾಗಭೂಷಣ ಬಿನ್ ಲೇಟ್ ಮುದ್ದಪ್ಪ.ಜಿ.ಆರ್-50 ವರ್ಷ, **2.ಲಲಿತಮ್ಮ** ಬಿನ್ ಲೇಟ್ ಮುದ್ದಪ್ಪಜಿ.ಆರ್- 47 ವರ್ಷ, **3.ತಿಮ್ಮರಾಜು** ಬಿನ್ ಲೇಟ್ ಮುದ್ದಪ್ಪ.ಜಿ.ಆರ್-45 ವರ್ಷ, **4. ರಂಗಪ್ಪ** ಬಿನ್ ಲೇಟ್ ಮುದ್ದಪ್ಪಜಿ. ಆರ್- 42 ವರ್ಷ, **5.ಮಂಜಮ್ಮ** ಬಿನ್ ಲೇಟ್ ಮುದ್ದಪ್ಪಜಿ.ಆರ್- 35 ವರ್ಷ, ಎಲ್ಲರ ವಾಸ: ಚಂದ್ರಗಿರಿ ಮಜರೆ, ಗುಟ್ಟೇ ಗ್ರಾಮ, ದೊಡ್ಡೇರಿ ಹೋಬಳಿ, ಮಧುಗಿರಿ ತಾಲ್ಲೂಕು.

-: ವಿರುದ್ಧ :-

ಎದುರುದಾರರು:-ಡೆಪ್ಯೂಟಿ ತಹಶೀಲ್ದಾರ್, ನಾಡಕಛೇರಿ, ದೊಡ್ಡೇರಿ ಹೋಬಳಿ, ಮಧುಗಿರಿ ತಾಲ್ಲೂಕು,

ಸಾರ್ವಜನಿಕ ಪ್ರಕಟಣೆ

ಮೇಲ್ಕಂಡ 1 ರಿಂದ 5ನೇ ಅರ್ಜಿದಾರರ ತಾಯಿಯಾದ ಜಯಮ್ಮ ಕೋಂ:ಲೇಟ್ ಮುದ್ದಪ್ಪ.ಜಿ.ಆರ್. ರವರು ದಿನಾಂಕ: 02-03-1990 ರಂದು ಮಧುಗಿರಿ ತಾಲ್ಲೂಕು, ದೊಡ್ಡೇರಿ ಹೋಬಳಿ, ಚಂದ್ರಗಿರಿ ಮಜರೆ, ಗುಟ್ಟೇ ಗ್ರಾಮದಲ್ಲಿ ಮರಣ ಹೊಂದಿದ್ದು. ಈ ಮೇಲ್ಕಂಡ ಅರ್ಜಿದಾರರು ಸದರಿ ಮೃತರ ಮರಣ ಸಮರ್ಥನಾ ಪತ್ರವನ್ನು ಪಡೆಯಲು ಈ ಮೇಲ್ಕಂಡ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಿರುತಾರೆ. ಸದರಿ ಮೃತರ ಬೇರೆ ಯಾರಾದರೂ ವಾರಸುದಾರರು ಇದ್ದಲ್ಲಿ ದಿನಾಂಕ:-06-09-2025 ರಂದು ಬೆಳಿಗ್ಗೆ 11-00 ಗಂಟೆಗೆ ಖುದ್ದು ತಾವಾಗಲೀ ಅಥವಾ ತಮ್ಮ ವಕೀಲರ ಮುಖಾಂತರವಾಗಲೀ ಹಾಜರಾಗಿ ತಕರಾರು ಸಲ್ಲಿಸಬಹುದು. ಇಲ್ಲವಾದ್ದಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು.

2025 ನೇ ವರ್ಷದ ಆಗಸ್ಟ್ ತಿಂಗಳ 16 ನೇ ದಿನ.

ನ್ಯಾಯಾಲಯದ ಅಪ್ಪಣೆಯ ಮೇರೆಗೆ,ನ್ಯಾಯಾಲಯದ ಮೊಹರಿನೊಂದಿಗೆ

ಶಿರಸ್ತೇದಾರರು

ಅಧಿಕ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ. ರವರ ನ್ಯಾಯಾಲಯ, ಮಧುಗಿರಿ.

ಅರ್ಜಿದಾರರ ಪರ ವಕೀಲರು.
ಟಿ.ಡಿ.ಮೊಹಮದ್ ಆದಿಲ್,
ವಕೀಲರು, ಮಧುಗಿರಿ.

ಗೌರವಾನ್ವಿತ ಉಪ-ವಿಭಾಗಾಧಿಕಾರಿ ರವರ ನ್ಯಾಯಾಲಯ, ಮಧುಗಿರಿ.

ಆರ್. ಆರ್. ಟಿ (ಅ)(ಕೆ) ಸಂಖ್ಯೆ-54/2024

ಅರ್ಜಿದಾರರು:- ಶ್ರೀ ಚಿಕ್ಕಕಾವಲಪ್ಪ

-: ವಿರುದ್ಧ :-

ತಹಸೀಲ್ದಾರ್ ರವರು ಮತ್ತು ಇನ್ನೊಬ್ಬರು

-ಎದುರುದಾರರು:-

ಸಂ-2. ಮುರುಡರಾಜು ಬಿನ್ ಕೆ.ಎಂ. ಬಸಣ್ಣ , ಕರ್ನಾಟಕ ಬ್ಯಾಂಕ್ ಎದುರು ಪ್ರಧಾನ ರಸ್ತೆ ಕೊರಟಗೆರೆ ಟೌನ್ ತುಮಕೂರು ಜಿಲ್ಲೆ.

ಪತ್ರಿಕಾ ಪ್ರಕಟಣೆ

ಈ ಮೇಲ್ಕಂಡ ಮೇಲ್ಮನವಿಯನ್ನು ಅರ್ಜಿದಾರರು ಎದುರುದಾರರ ವಿರುದ್ಧ ಕೊರಟಗೆರೆ ತಾಲ್ಲೂಕು, ಸಿ.ಎನ್.ದುರ್ಗ ಹೋಬಳಿ, ಗಟ್ಲಹಳ್ಳಿ ಗ್ರಾಮದ 58 ರಲ್ಲಿ 4-14 ಗುಂಟೆ ಜಮೀನಿಗೆ ಸಂಬಂಧಿಸಿದಂತೆ ಆರ್.ಆರ್.308 ರದ್ದುಗೊಳಿಸಲು ಅರ್ಜಿಯನ್ನು ಸಲ್ಲಿಸಿರುತ್ತಾರೆ. ಸದರಿ ಕೇಸಿನಲ್ಲಿ ಮೇಲ್ಕಂಡ ಎದುರುದಾರರಿಗೆ ನ್ಯಾಯಾಲಯದಿಂದ ಕಳುಹಿಸಿದ ನೋಟಿಸ್ ಜಾರಿಯಾಗದೆ ವಾಪಸ್ಸು ಬಂದಿರುತ್ತದೆ ಅಲ್ಲದೆ ಅಂಚೆ ಕಛೇರಿಯ ಮೂಲಕ ಕಳುಹಿಸಿದ ನೋಟಿಸ್ ಸಹ ಜಾರಿಯಾಗದೇ ಇರುದದ್ದರಿಂದ ಈ ಪ್ರಕಟಣೆ ಕೊಡಲಾಗಿದೆ. ಆದುದರಿಂದ ಈ ಮೇಲ್ಕಂಡ ಎದುರುದಾರರಾದ ನೀವು ಈ ಕೆಳಗೆ ಕಾಣಿಸಿದ ದಿನಾಂಕ-08-09-2025 ರಂದು ನ್ಯಾಯಾಲಯಕ್ಕೆ ತಪ್ಪದೆ ಹಾಜರಾಗುವುದು. ಒಂದು ವೇಳೆ ಹಾಜರಾಗಲು ತಪ್ಪಿದ್ದಲ್ಲಿ ನಿಮ್ಮ ಅನುಪಸ್ಥಿತಿಯಲ್ಲಿ ಕೇಸನ್ನು ಏಕಪಕ್ಷೀಯವಾಗಿ ತೀರ್ಮಾನಿಸಬೇಕಾಗುತ್ತದೆ. -

ನ್ಯಾಯಾಲಯದ ಮೊಹರಿನೊಂದಿಗೆ ನೀಡಲಾಗಿದೆ.

ನ್ಯಾಯಾಲಯದ ಆದೇಶದ ಮೇರೆಗೆ,

ತಹಸೀಲ್ದಾರ್ ಗ್ರೇಡ್-2

ಉಪ ವಿಭಾಗಾಧಿಕಾರಿಗಳ ಕಾರ್ಯಾಲಯ ಮಧುಗಿರಿ.
ಎಸ್.ಸಂಜೀವರಾಜು.
ಮೇಲ್ಮನವಿದಾರರ ಪರ ವಕೀಲರು,
ಕೊರಟಗೆರೆ.

ಅಧಿಕ ಸಿವಿಲ್ ಜಡ್ಜ್ ಮತ್ತು ಜೆಎಂಎಫ್ ಸಿ ರವರ ನ್ಯಾಯಾಲಯ ಮಧುಗಿರಿ.

ಸಿಮಿಸ್ ಸಂಖ್ಯೆ-659/2025

ಅರ್ಜಿದಾರರು:- 1.ಲಕ್ಷ್ಮೀಪತಿ ಹೆಚ್.ಬಿ. ಬಿನ್ ಲೇಟ್ ಬೀರಲಿಂಗಪ್ಪ- 31 ವರ್ಷ, **2 ಕಾಮಾಕ್ಷಮ್ಮ** ಕೋ. ಲೇಟ್ ಬೀರಲಿಂಗಪ್ಪ-56 ವರ್ಷ, ಅರ್ಜಿದಾರರ ವಾಸ: ಹೂವಿನಹಳ್ಳಿ ಗ್ರಾಮ, ಐ.ಡಿ.ಹಳ್ಳಿ ಹೋಬಳಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ.

-: ವಿರುದ್ಧ :-

ಎದುರುದಾರರು:-ಉಪ-ತಹಶೀಲ್ದಾರ್ ರವರು, ಐ.ಡಿ ಹಳ್ಳಿ ಹೋಬಳಿ ಮಧುಗಿರಿ ತಾಲೂಕು, ತುಮಕೂರು ಜಿಲ್ಲೆ.

ಸಾರ್ವಜನಿಕ ಪ್ರಕಟಣೆ

2ನೇ ಅರ್ಜಿದಾರರ ಮಾವನಾದ ಮಾಲೂರಪ್ಪ ಬಿನ್ ಲೇಟ್ ಬಿನ್ ಲೇಟ್ ಮೇಕೆತಿಮ್ಮಯ್ಯರವರು ದಿನಾಂಕ-09/09/1985 ರಂದು ತುಮಕೂರು ಜಿಲ್ಲೆ, ಮಧುಗಿರಿ ತಾಲ್ಲೂಕು, ಐ.ಡಿ.ಹಳ್ಳಿ ಹೋಬಳಿ, ಹೂವಿನಹಳ್ಳಿ ಗ್ರಾಮದಲ್ಲಿ ಮೃತಪಟ್ಟಿರುತ್ತಾರೆ. ಮೃತರ ಮರಣ ಸಮರ್ಥನ ಪತ್ರವನ್ನು ಅರ್ಜಿದಾರರು ಪಡೆಯಲು ತಕರಾರು ಇದ್ದಲ್ಲಿ ತಾವಾಗಲೀ ಈ ನ್ಯಾಯಾಲಯಕ್ಕೆ ದಿನಾಂಕ; 08/09/2025 ರಂದು ಬೆಳಗ್ಗೆ 11 ಗಂಟೆಗೆ ಖುದ್ದು ಅಥವಾ ವಕೀಲರ ಮೂಲಕವಾಗಲೀ ಹಾಜರಾಗಿ ತಮ್ಮ ತಕರಾರು ಸಲ್ಲಿಸುವುದು. ಇಲ್ಲವಾದಲ್ಲಿ ಸದರಿ ಅರ್ಜಿಯನ್ನು ಯಾರ ತಕರಾರು ಇಲ್ಲವೆಂದು ಪರಿಗಣಿಸಿ ತೀರ್ಮಾನ ಮಾಡಲಾಗುವುದು.

ಈ ಪ್ರಕಟಣೆಯನ್ನು ದಿನಾಂಕ: 16/08/25 ರಂದು ನ್ಯಾಯಾಲಯದ ಮೊಹರಿನೊಂದಿಗೆ ಅನುಮೋದನೆ ನೀಡಲ್ಪಟ್ಟಿದೆ.

ಶಿರಸ್ತೆದಾರರು ಅಧಿಕ ಸಿವಿಲ್ ಜಡ್ಜ್ ಮತ್ತು ಜೆಎಂಎಫ್ ಸಿ ರವರ ನ್ಯಾಯಾಲಯ ಮಧುಗಿರಿ.
ಕೆ.ಬಿ ಅನಿಲ್ ಕುಮಾರ್
ಡಿ.ಪಿ.ನರಸಿಂಹಮೂರ್ತಿ.
ಅರ್ಜಿದಾರರ ಪರ ವಕೀಲರು ಕೊರಟಗೆರೆ.

ಬೈಪಾಸ್ ಗಣೇಶೋತ್ಸವ ಆರಂಭ

ಗೌರಿಬಿದನೂರು: ನಗರದ ಬೈಪಾಸ್ ರಸ್ತೆಯ ಶ್ರೀ ವಿದ್ಯಾಗಣಪತಿ ಯುವಕರ ಸಂಘದ ವತಿಯಿಂದ ಪ್ರತಿವರ್ಷದಂತೆ ಈ ವರ್ಷವೂ 19 ದಿನಗಳ ಕಾಲ ಅತ್ಯಂತ ಶ್ರದ್ಧಾಭಕ್ತಿಯಿಂದ ಗಣೇಶೋತ್ಸವವನ್ನು ಆಚರಿಸಲಾಗುವುದು ಎಂದು ಸಂಘದ ಅಧ್ಯಕ್ಷ ಬೈಪಾಸ್ ರವಿಕುಮಾರ್ ತಿಳಿಸಿದರು.

ಅವರು ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿ, ಈ ಬಾರಿ 22 ಅಡಿ ಎತ್ತರದ ಪ್ರಣವರುದ್ರ ಮಹಾಗಣಪತಿಯ ಮೂರ್ತಿಯನ್ನು ಪ್ರತಿಷ್ಠಾಪನೆ ಮಾಡಲಿದ್ದು,ಗಣಪತಿ ವಿಗ್ರಹವನ್ನು ಸ್ಥಳದಲ್ಲಿಯೇ ತಯಾರು ಮಾಡಲು ಒಂದು ತಿಂಗಳ ಹಿಂದೆಯೇ ದೂರದ ಕಲ್ಕತ್ತಾದಿಂದ ನುರಿತ ಶಿಲ್ಪಿಗಳು,ಕಲಾಕಾರರು ಬಂದಿದ್ದಾರೆ ಎಂದರು. ಸಂಘದ ಸದಸ್ಯ ಹುದುಗೂರು ಶಿವಕುಮಾರ್ ಮಾತನಾಡಿ, ಈ ಬಾರಿಯ ಗಣಪತಿ ಪೆಂಡಾಲು ನಿರ್ಮಿಸಲು ಸುಪ್ರಸಿದ್ಧ ನಕ್ಷತ್ರ ಇವೆಂಟ್ ಅವರನ್ನು ಗೊತ್ತುಪಡಿಸಲಾಗಿದ್ದು, ದೇಶದ ಪ್ರಸಿದ್ಧ ಧಾರ್ಮಿಕ ಸ್ಥಳಗಳಾದ ಬದರಿನಾಥ್, ಅಯೋಧ್ಯೆ, ಕೇದಾರನಾಥ ಹಾಗೂ ಇನ್ನಿತರೆ ದೇವಾಲಯಗಳ ಪ್ರತಿರೂಪಗಳನ್ನು ಬಿಂಬಿಸಲಾಗುತ್ತದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಸಂಘದ ಸದಸ್ಯ ನಿಖಿಲ್, ಸ್ವಾಗತ್,ಬಾಬುರೆಡ್ಡಿ, ಲಕ್ಷ್ಮೀಪತಿ, ಶಿವಾರೆಡ್ಡಿ, ಶಾಂತರಾಜು ಇದ್ದರು.



ಮೈಸೂರಿನ ಕುವೆಂಪುನಗರ ಬಡಾವಣೆಯಲ್ಲಿ ನೂತನವಾಗಿ ತೆರೆಯಲಾಗಿರುವ ಫೋರ್ಟಿಸ್ ಸಂಸ್ಥೆಯ ಅಂಗಸಂಸ್ಥೆಯಾದ ಅಜಿಲಸ್ ಡಯಾಗ್ನಸ್ಟಿಕ್ ಕೇಂದ್ರವನ್ನು ಜಿಲ್ಲಾಧಿಕಾರಿ ಲಕ್ಷ್ಮಿಕಾಂತ ರೆಡ್ಡಿ ಉದ್ಘಾಟಿಸಿದರು. ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್ ಹಾಗೂ ಸಂಸ್ಥೆಯ ಪ್ರಮುಖರು ಇದ್ದಾರೆ.

ಶಿಕ್ಷಣದ ಜತೆ ಸಂಸ್ಕಾರ ಬೆಳೆಸಿ

ಬಾಗೇಪಲ್ಲಿ: ವಿದ್ಯಾರ್ಥಿಗಳಿಗೆ ಉತ್ತಮ ಬದುಕಿನ ದಾರಿ ತೋರುವ ಸಂಸ್ಕಾರಯುತ ಶಿಕ್ಷಣದ ಜತೆಗೆ ಅವರಲ್ಲಿ ಶಿಸ್ತು, ಸಮಯಪಾಲನೆ ಬೆಳೆಸಿ ಸಮಾಜಕ್ಕೆ ಕೊಡುಗೆಯಾಗಿ ನೀಡಿರುವ ಇತಿಹಾಸ ಚಾಕವೇಲು ಪ್ರೌಢಶಾಲೆಯ ಶಿಕ್ಷಕ ವೃಂದದವರಿಗೆ ಮಾತ್ರ ಸಲ್ಲುತ್ತದೆ ಎಂದು ನಿವೃತ್ತ ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ನಾರಾಯಣರೆಡ್ಡಿ ತಿಳಿಸಿದ್ದಾರೆ.

ನೂತನ ಚೇಳೂರು ತಾಲೂಕಿನ ಚಾಕವೇಲು ಗ್ರಾಮದ ಸರ್ಕಾರಿ ಪ್ರೌಢಶಾಲಾ ಅವರಣದಲ್ಲಿ ಶಾಲೆಯ 1991-92 ನೇ ಸಾಲಿನ ವಿದ್ಯಾರ್ಥಿ ಬಳಗದ ವತಿಯಿಂದ ಅಯೋಜಿಸಿದ್ದ ಗುರುವಂದನಾ ಹಾಗೂ ಸ್ನೇಹ ಸಮ್ಮಿಲನಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮಗುವಿನಿಂದ ಸೃಷ್ಟಿಯಾಗಿ ಹೆಣದೊಂದಿಗೆ ಮುಕ್ತಾಯಗೊಳ್ಳುವ ಮನುಷ್ಯನ ಜೀವಿತ ಕಾಲದಲ್ಲಿ ಸಮಾಜಕ್ಕೆ ಒಳಿತನ್ನು ನೀಡುವ ಹಾಗೂ ಪರೋಪಕಾರಿ ಕೆಲಸಗಳನ್ನು ಮಾಡಿ ಇತರರಿಗೆ ಮಾದರಿ ಆಗಿ ಸಮಾಜಮುಖಿ ಕೆಲಸಗಳನ್ನು ಮಾತ್ರ ಜೀವನದಲ್ಲಿ ಅಳವಡಿಸಿಕೊಳ್ಳಬೇಕಾಗಿದೆ. ಇದಕ್ಕೆ ಉತ್ತಮ ಉದಾಹರಣೆ ಚಾಕವೇಲು (ಮಾರುತಿ ಪ್ರೌಢಶಾಲೆ) ಸರ್ಕಾರಿ ಪ್ರೌಢಶಾಲೆಯಲ್ಲಿ ವ್ಯಾಸಂಗ ಮಾಡಿರುವ ಹಳೇ ವಿದ್ಯಾರ್ಥಿಗಳ ಮನೋಭಾವನೆ, ಸೇವೆ, ಕೊಡುಗೆ, ಸಂಸ್ಕಾರ ಸಾಕ್ಷಿಯಾಗಿದೆ ಎಂದರು.

35 ವರ್ಷಗಳ ಹಿಂದೆ ಓದಿರುವ ಶಾಲೆ ಹಾಗೂ ಪಾಠ ಹೇಳಿರುವ ಶಿಕ್ಷಕ ವೃಂದದವರನ್ನು ಗುರುತಿಸಿ ಗುರುವಂದನಾ ಕಾರ್ಯಕ್ರಮ ಅಯೋಜಿಸಿ ವಿದ್ಯಾರ್ಥಿಗಳಾದ ನೀವು ಗುರುಗಳಿಗೆ ನೀಡುತ್ತಿರುವ ಗೌರವ ನೋಡಿದರೆ ಶಿಕ್ಷಕರಾದ ನಾವು ನಿಮಗೆ ಶಿಕ್ಷಣದ ಜತೆಗೆ ಒಳ್ಳೆಯ ಸಂಸ್ಕಾರವನ್ನು ಕಲಿಸಿದ್ದೇವೆಂಬ ಸಾರ್ಥಕತೆ, ತೃಪ್ತಿ ನಮಗೆ ದೊರೆತಿದೆ ಎಂದು ಭಾವುಕರಾದರು. ಈ ಸಂದರ್ಭದಲ್ಲಿ ನಿವೃತ್ತ ಶಿಕ್ಷಕ ಇ.ವಿ.ರೆಡ್ಡಪ್ಪ ಹಾಗೂ ಇತರೆ ಶಿಕ್ಷಕರು ಮಾತನಾಡಿದರು.

ನಿವೃತ್ತ ಶಿಕ್ಷಕರಾದ ಇ.ವಿ.ರೆಡ್ಡಪ್ಪ, ಬಿ.ಎಲ್. ಲಕ್ಷ್ಮಣ ರೆಡ್ಡಿ, ಜಯರಾಮರೆಡ್ಡಿ, ಬಿ. ವೆಂಕಟೇಶಮೂರ್ತಿ, ರಾಮಕೃಷ್ಣ, ವಿಜಯಮ್ಮ, ಕೆ.ಮುತ್ತಾರೆಡ್ಡಿ, ಎ.ಆರ್.ಕೃಷ್ಣಾರೆಡ್ಡಿ, ಬಿ.ಎನ್. ಶಿವಾರೆಡ್ಡಿ ಸಿಬ್ಬಂದಿ ಶಿವಪ್ಪ, ಶ್ರೀನಿವಾಸ ಇದ್ದರು.

ಮಾದಪ್ಪನ ಬೆಟ್ಟದಲ್ಲಿ ಸಾಮೂಹಿಕ ವಿವಾಹ | ದಾಂಪತ್ಯ ಜೀವನಕ್ಕೆ ಕಾಲಿಟ್ಟ 93 ಜೋಡಿ

ಸರಳ ಮದುವೆ ಉತ್ತಮ

ಚಾಮರಾಜನಗರ: ರಾಜ್ಯದ ಪ್ರಸಿದ್ಧ ಯಾತ್ರಾ ಸ್ಥಳಗಳಲ್ಲಿ ಒಂದಾದ ಶ್ರೀಮಲೆ ಮಹದೇಶ್ವರ ಬೆಟ್ಟದಲ್ಲಿ ಮಲೆ ಮಹದೇಶ್ವರ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಸೋಮವಾರ ಆಯೋಜನೆ ಮಾಡಿದ್ದ ಉಚಿತ ಸಾಮೂಹಿಕ ವಿವಾಹದಲ್ಲಿ 93 ಜೋಡಿ ದಾಂಪತ್ಯ ಜೀವನಕ್ಕೆ ಕಾಲಿಟ್ಟರು.

ಮಲೆ ಮಹದೇಶ್ವರ ಬೆಟ್ಟದ ದೇವಾಲಯದ ಸಮೀಪದ ರಂಗ ಮಂದಿರದಲ್ಲಿ ಶ್ರೀ ಕ್ಷೇತ್ರ ಮಲೆ ಮಹದೇಶ್ವರ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಸಾಮೂಹಿಕ ವಿವಾಹ ಏರ್ಪಡಿಸಲಾಗಿತ್ತು.ಸೋಮವಾರ ಬೆಳಿಗ್ಗೆ 9.20 ರಿಂದ 10.10 ರೊಳಗೆ ಸಲ್ಲುವ ಶುಭ ಕನ್ಯಾ ಲಗ್ನದಲ್ಲಿ ಸುತ್ತೂರು ಶ್ರೀದೇಶಿ ಕೇಂದ್ರ ಶಿವರಾತ್ರಿಶ್ವರ ಸ್ವಾಮೀಜಿ ಹಾಗೂ ಸಾಲೂರು ಮಠದ ಶ್ರೀ ಶಾಂತ ಮಲ್ಲಿಕಾರ್ಜುನ ಸ್ವಾಮೀಜಿ ನೇತೃತ್ವದಲ್ಲಿ ಶಾಸ್ತ್ರೋಕ್ತವಾಗಿ ನೆರವೇರಿಸಲಾಯಿತು. ವಧುವಿಗೆ ಸೀರೆ, ಮಾಂಗಲ್ಯ,ಬಳೆ, ರವಿಕೆ,ಕಾಲುಂಗುರ ಹಾಗೂ ವರನಿಗೆ ಪಂಚೆ,ಶರ್ಟ್, ಟವೆಲ್ ನ್ನು ಪ್ರಾಧಿಕಾರದ ವತಿಯಿಂದ ನೀಡಲಾಯಿತು.

ಸುತ್ತೂರು ಶ್ರೀ ಶಿವರಾತ್ರಿ ದೇಶೀ ಕೇಂದ್ರ ಸ್ವಾಮೀಜಿ ಮಾತನಾಡಿ, ಮಲೆ ಮಹದೇಶ್ವರರು ಜನರಲ್ಲಿ ಜಾಗೃತಿ ಮೂಡಿಸಿದ ಪವಾಡ ಪುರುಷರು. ಇಂತಹ ಪುಣ್ಯ ಕ್ಷೇತ್ರದಲ್ಲಿ ಉಚಿತ ವಿವಾಹ ಮಹೋತ್ಸವ ನಡೆಯುತ್ತಿದೆ ಎಂದರೆ ನೀವೆಲ್ಲರೂ ಪುಣ್ಯವಂತರು.

ಇಂತಹ ಕ್ಷೇತ್ರದಲ್ಲಿ ದಾಂಪತ್ಯ ಜೀವನಕ್ಕೆ ಕಾಲಿಟ್ಟ ಮೇಲೆ ನೀವು ಒಳ್ಳೆಯ ಜೀವನ ನಡೆಸಬೇಕು.ದಂಪತಿಗಳು ಇಬ್ಬರೂ ಮಾನಸಿಕ ವಾಗಿ

ಒಂದಾಗಬೇಕು, ಪರಸ್ಪರ ಒಬ್ಬರನ್ನು ಒಬ್ಬರು ಅರ್ಥ ಮಾಡಿಕೊಂಡು ಜೀವನ ನಡೆಸಿದರೆ ಬದುಕು ಸುಂದರವಾಗಿರುತ್ತದೆ ಎಂದರು.

ಶಾಸಕ ಎಂ ಆರ್ ಮಂಜುನಾಥ್ ಮಾತನಾಡಿ, ಮಲೆ ಮಹದೇಶ್ವರ ಬೆಟ್ಟದಲ್ಲಿ ಉಚಿತ ಸಾಮೂಹಿಕ ವಿವಾಹವಾದರೆ ಪುಣ್ಯದ ಕೆಲಸ. ದೇವರು ಸದಾ ನಿಮ್ಮ ಬಾಳನ್ನು ಹಸನು ಮಾಡುತ್ತಾನೆ. ಜೊತೆಗೆ ನಿಮಗೆ ಆರ್ಥಿಕವಾಗಿ ಒಂದಷ್ಟು ಸಹಾಯ ಆದಂತೆ ಆಗುತ್ತದೆ. ದುಂದು ವೆಚ್ಚಕ್ಕೆ ಕಡಿವಾಣ

ಮಲೆ ಮಹದೇಶ್ವರ ಬೆಟ್ಟದಲ್ಲಿ ನಡೆದ ಸಾಮೂಹಿಕ ವಿವಾಹದಲ್ಲಿ 93 ಜೋಡಿ ದಾಂಪತ್ಯ ಜೀವನಕ್ಕೆ ಕಾಲಿಟ್ಟರು.

ಹಾಕಿದಂತಾಗಿದೆ.ಹಾಗಾಗಿ ಸಾಮೂಹಿಕ ವಿವಾಹಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕು.ದೇವಾಲಯದಲ್ಲಿ ಮದುವೆಯಾದರೆ ಜೋಡಿಗಳ ಜೀವನ ನೆಮ್ಮದಿಯಾಗಿರುತ್ತದೆ ಎಂಬುದು ವಾಡಿಕೆ. ಇಲ್ಲಿಯವರೆಗೆ 2024 ಜೋಡಿ ಹೊಸ ಜೀವನಕ್ಕೆ ಕಾಲಿಟ್ಟಿದ್ದಾರೆ.0 ನಿಮಗೆ ಮಾದಪ್ಪನ ಆಶೀರ್ವಾದ ಸಿಗಲಿ ಎಂದರು.

ಮೆಟ್ಟೂರು ಶಾಸಕ ಸದಾಶಿವಂ ಮಾತನಾಡಿ, ಕರ್ನಾಟಕದ ಈ ಕ್ಷೇತ್ರ ಮಲೆ ಮಹದೇಶ್ವರ ಬೆಟ್ಟದಲ್ಲಿ ಹಲವು ವರ್ಷಗಳಿಂದ ಸಾಮೂಹಿಕ ವಿವಾಹ ಕಾರ್ಯಕ್ರಮ ನಡೆಯುತ್ತಿರುವುದರಿಂದ ಬಡ ಕುಟುಂಬದವರು ಹಾಗೂ ಮಧ್ಯಮ ವರ್ಗದವರಿಗೆ ಹೆಚ್ಚಿನ ಅನುಕೂಲವಾಗಿದೆ. ನವೆಂಬರ್ ನಲ್ಲಿ ತಮಿಳುನಾಡಿನಲ್ಲಿ ಅಧಿವೇಶನ ನಡೆಯಲಿದ್ದು ತಮಿಳುನಾಡಿನ ಪ್ರಮುಖ ದೇವಾಲಯಗಳಲ್ಲಿಯೂ ಉಚಿತ ಸಾಮೂಹಿಕ ಕಾರ್ಯಕ್ರಮವನ್ನು ಆಯೋಜನೆ ಮಾಡಲು ಚರ್ಚೆ ನಡೆಸಲಾಗುವುದು ಎಂದು ತಿಳಿಸಿದರು.

ವಿವಾಹ ಪ್ರಯುಕ್ತ ಮಲೆ ಮಹದೇಶ್ವರ ಬೆಟ್ಟದ ದಾಸೋಹ ಭವನದಲ್ಲಿ ವಿಶೇಷ ಸಿಹಿ ಭೋಜನ ವ್ಯವಸ್ಥೆ ಮಾಡಲಾಗಿತ್ತು. ಮೈಸೂರಿನ ವಿಶೇಷಚೇತನ ರಾಜು ಮತ್ತು ಶ್ರೀರಂಗಪಟ್ಟಣದ ಶ್ವೇತಾ ಜೋಡಿ ಕೂಡ ಸಪ್ತಪದಿ ತುಳಿಯಿತು.

ಇದೆ ಸಂದರ್ಭದಲ್ಲಿ ಸಾಲೂರು ಮಠದ ಶ್ರೀ ಶಾಂತ ಮಲ್ಲಿಕಾರ್ಜುನ ಸ್ವಾಮೀಜಿ, ಮೆಟ್ಟೂರು ಶಾಸಕರಾದ ಸದಾಶಿವಂ, ಗ್ಯಾರಂಟಿ ಯೋಜನೆ ಗಳ ಅಧ್ಯಕ್ಷ ಚಂದ್ರು, ಜಿಲ್ಲಾ ಪಂಚಾಯಿತಿ ಸಿ ಇ ಒ ಮೋನಾ ರೋತ್, ಎಸ್ ಪಿ ಡಾ. ಬಿ ಟಿ ಕವಿತಾ, ಪ್ರಾಧಿಕಾರದ ಕಾರ್ಯದರ್ಶಿ ಎ ಇ ರಘು,ಡಿ ವೈ ಎಸ್ ಪಿ ಧರ್ಮೇಂದ್ರ, ಹನೂರು ತಹಸೀಲ್ದಾರ್ ಚೈತ್ರ, ನಾಮನಿರ್ದೇಶಿತ ಸದಸ್ಯರಾದ ಭಾಗ್ಯಮ್ಮ, ಮರಿಸ್ವಾಮಿ,ಗ್ರಾಮ ಪಂಚಾಯಿತಿ ಅಧ್ಯಕ್ಷೆ ಅರ್ಚನಾ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಬ್ರಾಹ್ಮಣ ಮಹಾಸಭೆ ದತ್ತಿನಿಧಿಗೆ ನೆರವು ಅಗತ್ಯ

ಮೈಸೂರು: ಬ್ರಾಹ್ಮಣರ ಅಭಿವೃದ್ಧಿಗಾಗಿ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾ ಸಭೆಯ ದತ್ತಿನಿಧಿಗೆ ಉದಾರವಾಗಿ ನೆರವು ನೀಡಿ ಸದೃಡಗೊಳಿಸಿ ವಿದ್ಯಾಬ್ಯಾಸ ಹಾಗೂ ಆರೋಗ್ಯ ಯೋಜನೆಗಳ ಅನು ಷ್ಠಾನಕ್ಕೆ ಸಹಕಾರ ನೀಡಬೇಕಾಗಿ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭೆ ಅಧ್ಯಕ್ಷ ಎಸ್ ರಘುನಾಥ್ ಮನವಿ ಮಾಡಿದರು.

ನಗರದ ಹೂಟಗಳ್ಳಿ ಕೆಎಚ್‌ಬಿ ಬಡಾವಣೆಯ ಅನಂತೇಶ್ವರ ಭವನದಲ್ಲಿ ಆಯೋಜಿಸಲಾಗಿದ್ದ ಗಾಯತ್ರಿ ವಿಪ್ರ ಸಂಘದ 18ನೇ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಎಕೆಬಿಎಸ್‌ನ ಅಧ್ಯಕ್ಷನಾಗಿ ಆಯ್ಕೆಯಾದ ನಂತರ ಸಮುದಾಯದ ಅಶಕ್ತರು ಹಾಗೂ ಬಡ ವಿದ್ಯಾರ್ಥಿಗಳಿಗೆ ನೆರವಾಗುವಲ್ಲಿ 100 ಕೋಟಿ ರೂ.ಗಳ ಕಾರ್ಪಸ್ ಫಂಡ್ ಸ್ಥಾಪಿಸಲು ಗುರಿ ಹೊಂದಲಾಗಿದ್ದು, ಸಮುದಾಯದ ಸಶಕ್ತ 10000 ಬ್ರಾಹ್ಮಣರು, ತಲಾ ಒಂದು ಲಕ್ಷ ರೂಪಾಯಿ ದೇಣಿಗೆ ನೀಡಿದರೆ ನಮ್ಮ ಗುರಿ ತಲುಪಬಹುದು ಎಂದು ನುಡಿದರು.

ಚುನಾವಣೆ ನಡೆದು ನಾಲ್ಕು ತಿಂಗಳು ಕಳೆದಿದ್ದು ಇನ್ನು ಮುಂದೆ ನಮ್ಮ ಕೆಲಸದ ಜವಾಬ್ದಾರಿಯನ್ನು ಹೊರಬೇಕಾಗಿದೆ. ಆದ್ದರಿಂದ ಯಾವುದೇ ಅಭಿನಂದನೆಗಳನ್ನು ಸ್ವೀಕರಿಸದಿರಲು ತೀರ್ಮಾನಿಸಿದ್ದು ಇನ್ನು ಮುಂದೆ ರಾಜ್ಯಾದ್ಯಂತ ಯಾರೂ ಕೂಡ ಅಭಿನಂದನಾ ಕಾರ್ಯಕ್ರಮವನ್ನು ಏರ್ಪಡಿಸಬಾರದು. ಅದಕ್ಕೆ ತಗಲುವ ವೆಚ್ಚವನ್ನು ಈ ದತ್ತು ನಿಧಿಗೆ ದೇಣಿಗೆ ನೀಡಿದರೆ ಸಮಾಜಕ್ಕೆ ಸಹಾಯಕವಾಗುತ್ತದೆ ಎಂದು ತಿಳಿಸಿದರು.

ಗಾಯಿತ್ರಿ ವಿಪ್ರ ಸಂಘದ ಗೌರವಾಧ್ಯಕ್ಷ ಬೈರಿ ನಾಗರಾಜ್, ಮಹಾಸಭಾ ರಾಜ್ಯ ಉಪಾಧ್ಯಕ್ಷ ನಂ.ಶ್ರೀಕಂಠ ಕುಮಾರ್, ಗಾಯತ್ರಿ ವಿಪ್ರ ಸಂಘದ ಅಧ್ಯಕ್ಷ ಯಂ. ನಾರಾಯಣ ಭಟ್, ಉಪಾಧ್ಯಕ್ಷ ಜಗದೀಶ್ ಪ್ರಸಾದ್ ಪ್ರಧಾನ ಕಾರ್ಯದರ್ಶಿ ಆರ್. ಮಹೇಶ್ ಕುಮಾರ್, ಖಜಾಂಚಿ ರಘು , ಸಮಿತಿ ಸದಸ್ಯರಾದ ವಿದ್ಯಾಧರ, ವಿಶ್ವನಾಥ್, ಪದ್ಮ ಸೋಮಶೇಖರ್, ಪೂರ್ಣಿಮಾ ಗುರುರಾಜ್, ಗೀತಾ ವಾಸನ್ ಮುಂತಾದವರು ಉಪಸ್ಥಿತರಿದ್ದರು.

ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭೆ ಅಧ್ಯಕ್ಷ ಎಸ್ ರಘುನಾಥ್ ಮಾತನಾಡಿದರು.

ಸಮಾಚಾರ ಸಣ್ಣದಲ್ಲ

ರಾಜು ಬಗ್ಗೆ ಹಗುರ ಟೀಕೆ ಖಂಡನೆ

ಹುಣಸೂರು: ಇತ್ತೀಚಿಗೆ ಅಗರನಹಳ್ಳಿ ಮಂಟಿಕೊಪ್ಪಲು ಕುಮಾರ್ ತಾಲೂಕಿನ ದಲಿತ ನಾಯಕ ಬಿಳಿಕೆರೆ ರಾಜು ಬಗ್ಗೆ ಹಗುರವಾಗಿ ಮಾತನಾಡಿರುವುದನ್ನು ದಲಿತ ಯುವ ಮುಖಂಡ ಹಳೇಪುರ ಕಾಂತರಾಜ್ ಖಂಡಿಸಿದ್ದಾರೆ. ರಾಜ್ಯದ ಗೃಹ ಸಚಿವ ಡಾ.ಪರಮೇಶ್ವರ್ ಅವರ ಜನ್ಮದಿನವನ್ನು ಪರಮೋತ್ಸವ ಕಾರ್ಯಕ್ರಮವನ್ನು ಮೈಸೂರಿನಲ್ಲಿ ಅವರ ಅಭಿಮಾನಿಯದ ಬಿಳಿಕೆರೆ ರಾಜು ಅದ್ದೂರಿಯಾಗಿ ಆಚರಿಸಲು ನಿರ್ಧರಿಸಿದ್ದಾರೆ. ಕಳೆದ 43 ವರ್ಷದಿಂದ ಸುದೀರ್ಘ ರಾಜಕೀಯ ಮಾಡಿರುವ ರಾಜು ಬಿಳಿಕೆರೆ ಎಲ್ಲಿ ನೆನ್ನೆ ಮೊನ್ನೆ ರಾಜಕೀಯಕ್ಕೆ ಬಂದ ಕುಮಾರ್ ಎಲ್ಲಿ ಎಂದು ಟೀಕಿಸಿದರು. ಸುದ್ದಿಗೋಷ್ಠಿಯಲ್ಲಿ ದಲಿತ ವಕೀಲ ಮಧು ಕುಮಾರ್, ಮುಖಂಡರಾದ ಆಸ್ವಾಳ್ ಶಿವರಾಜ್, ಹಳ್ಳದ ಕೊಪ್ಪಲು ನಾಗರಾಜು, ಮಾರನಹಳ್ಳಿ ಸೋಮಶೇಖರ್ ಇದ್ದರು.

ರಕ್ತಚಂದನ ಸಾಗಣೆ: ಇಬ್ಬರ ಬಂಧನ

ಚಾಮರಾಜನಗರ: ಕೊಳ್ಳೇಗಾಲ ತಾಲೂಕಿನ ಸತ್ತೇಗಾಲ ಗ್ರಾಮದ ಬಳಿ ಅಕ್ರಮವಾಗಿ ರಕ್ತಚಂದನ ಸಾಗಣೆ ಮಾಡುತ್ತಿದ್ದ ಇಬ್ಬರನ್ನು ಸಿಐಡಿ ಅರಣ್ಯ ಸಂಚಾರಿ ದಳದವರು ಬಂಧಿಸಿರುವ ಘಟನೆ ಜರುಗಿದೆ.
ಚನ್ನಪಟ್ಟಣ ಟೌನ್ ಅಬೀಬ್ ಪುರ ಮೊಹಲ್ಲಾ ವಾಸಿ ತಬ್ರೇಜ್ ಖಾನ್‌ಹಾಗೂ ಮೆಹದಿನಗರ ಬಡಾವಣೆಯ ವಾಸಿ ಸಾದಿಕ್ ಪಾಷ ಬಂಧಿತ ಆರೋಪಿಗಳು, ಇವರಿಂದ 205 ಕೆ.ಜಿ ತೂಕದ ರಕ್ತಚಂದನ 28 ತುಂಡುಗಳು ಹಾಗೂ ಸಾಗಾಣಿಕೆ ಬಳಸಿದ್ದ ಟಾಟಾ ಸುಮೋ ಕಾರನ್ನು ಜಪ್ತಿ ಮಾಡಿದ್ದಾರೆ. ಖಚಿತ ಮಾಹಿತಿ ಮೇರೆಗೆ ಸಿಐಡಿ ಅರಣ್ಯ ಸಂಚಾರಿ ದಳದ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ವಿಜಯ ರಾಜ್ ಹಾಗೂ ಸಿಬ್ಬಂದಿಗಳು ದಾಳಿ ನಡೆಸಿ ಆರೋಪಿಗಳನ್ನು ಬಂಧಿಸಿದ್ದಾರೆ.ದಾಳಿಯಲ್ಲಿ ಸಿಐಡಿ ಅರಣ್ಯ ಸಂಚಾರಿ ದಳದ ಹೆಡ್ ಕಾನ್ಸಟೇಬಲ್ ಬಸವರಾಜು, ರಾಮಚಂದ್ರ, ಸ್ವಾಮಿ, ಲತಾ, ಸೈಯದ್ ಜಮೀಲ್, ಕಾನ್ಸಟೇಬಲ್ ಬಸವರಾಜು, ಚಾಲಕ ಪ್ರಭಾಕರ್ ಇದ್ದರು.

ಶಾಲೆಗೆ ನುಗ್ಗಿದ ಮರಿಯಾನೆ

ಚಾಮರಾಜನಗರ: ಮಳೆಯಿಂದಾಗಿ ಮರಿಯಾನೆಯೊಂದು ತಾಯಿಯಿಂದ ಬೇರ್ಪಟ್ಟು ಸರಕಾರಿ ಶಾಲೆಗೆ ನುಗ್ಗಿದ ಘಟನೆ ಕೇರಳದ ವಯನಾಡ್ ಜಿಲ್ಲೆಯ ಸುಲ್ತಾನ್ ಬತ್ತೇರಿ ತಾಲೂಕಿನ ಪುಲುಪಳ್ಳಿ ಗ್ರಾಮದಲ್ಲಿ

ನಡೆದಿದೆ. ತಾಯಿಯಿಂದ ಬೇರ್ಪಟ್ಟ ಮರಿಯೊಂದು ದಾರಿ ತಿಳಿಯದೆ ಶಾಲಾ ಆವರಣಕ್ಕೆ ಬಂದಿದೆ. ಮರಿಯಾನೆ ನೋಡಿದ ಮಕ್ಕಳು ಖುಷಿಯಿಂದ ಓಡಾಡುವುದನದನು ಕಂಡು ಮಕ್ಕಳನ್ನು ವಿಚಾರಿಸಿದಾಗ ಆನೆ ಮರಿ ಶಾಲಾ ಆವರಣಕ್ಕೆ ಬಂದಿರುವುದು ತಿಳಿಯುತ್ತದೆ.ಬಳಿಕ ಮಕ್ಕಳಿಗೆ ಕೊಠಡಿಗೆ ತೆರಳುವಂತೆ ಸೂಚನೆ ನೀಡಿದ್ದಾರೆ.ಮರಿಯಾನೆ ಶಾಲಾ ಆವರಣದಲ್ಲಿ ಓಡಾಡಿ ಬಳಿಕ ಮುಖ್ಯೋಪಾಧ್ಯಾಯರ ಕೊಠಡಿ ಬಳಿ ಬರುತ್ತದೆ. ಅ ಸಂದರ್ಭದಲ್ಲಿ ಮುಖ್ಯ ಶಿಕ್ಷಕರು ಅರಣ್ಯ ಇಲಾಖೆಗೆ ಮಾಹಿತಿ ತಿಳಿಸುತ್ತಾರೆ. ಅಲ್ಲಿಗೆ ಬಂದು ಅರಣ್ಯ ಇಲಾಖೆಯ ಸಿಬ್ಬಂದಿಗಳು ಮರಿಯನ್ನು ರಕ್ಷಣೆ ಮಾಡಿ ತಾಯಿ ಸೇರಿಸುವ ಕೆಲಸದಲ್ಲಿ ತೊಡಗಿದ್ದಾರೆ ಎಂದು ತಿಳಿದುಬಂದಿದೆ.

ಸಂತೋಷ್ ವಿರುದ್ಧದ ಹೇಳಿಕೆಗೆ ಖಂಡನೆ

ಮೈಸೂರು: ಶ್ರೀಕ್ಷೇತ್ರ ಧರ್ಮಸ್ಥಳ ಕ್ಷೇತ್ರದ ಪರವಾಗಿ ನಿಂತ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಹಿರಿಯ ಪ್ರಚಾರಕ ಬಿ.ಎಲ್. ಸಂತೋಷ್ ಅವರ ವಿರುದ್ಧ ಹಿಂದೂ ವಿರೋಧಿ ಶಕ್ತಿಗಳು ಅವಹೇಳ ನಕಾರಿ ಹೇಳಿಕೆ ನೀಡುತ್ತಿರುವುದು ಖಂಡನೀಯ ಎಂದು ಮೈಸೂರು ನಗರ ಬಿಜೆಪಿ ಉಪಾಧ್ಯಕ್ಷ ಹೇಮನಂದೀಶ್ ಹೇಳಿದ್ದಾರೆ. ಧರ್ಮಸ್ಥಳ ಕ್ಷೇತ್ರದ ಪರವಾಗಿ ನಿಲ್ಲುವ ವ್ಯಕ್ತಿಗಳನ್ನು ವ್ಯವಸ್ಥಿತವಾಗಿ ತೇಜೋವಧೆ ಮಾಡುವ ಪಿತೂರಿಯ ಮುಂದುವರಿದ ಭಾಗವಾಗಿ ಸಂತೋಷ್ ಅವರ ವಿರುದ್ಧ ಹೇಳಿಕೆ ನೀಡಲಾಗಿದೆ ಎಂದು ಅವರು ಹೇಳಿಕೆಯಲ್ಲಿ ತಿಳಿಸಿರುವ ಅವರು, ಇಂತಹ ಹೇಳಿಕೆಗಳ ಮೂಲಕ ಬಿ. ಎಲ್. ಸಂತೋಷ್ ಅವರ ಧರ್ಮಪರ ಹೋರಾಟ ತಡೆಯಲು ಸಾಧ್ಯವಿಲ್ಲ ಎಂದಿದ್ದಾರೆ. ಮತ ಕಳ್ಳತನದ ಮೂಲಕ ಬಿಜೆಪಿ ಅಧಿಕಾರಕ್ಕೆ ಏರಿದೆ ಎಂದು ದೇಶಾದ್ಯಂತ ರಾಹುಲ್ ಗಾಂಧಿ ಬಿಜೆಪಿ ವಿರುದ್ಧ ಗಂಭೀರ ಆರೋಪಿಸಿ ಪ್ರತಿಭಟನೆ ನಡೆಸುತ್ತಿವೆ. ಈ ಎಲ್ಲ ಆರೋಪಗಳಿಗೆ ಕೇಂದ್ರ ಚುನಾವಣೆ ಆಯೋಗ ಸ್ಪಷ್ಟ ಉತ್ತರ ನೀಡಿದ್ದು, ಆರೋಪ ಪ್ರಜಾಪ್ರಭುತ್ವ ಹಾಗೂ ಸಂವಿಧಾನಕ್ಕೆ ಮಾಡಿದ ಅವಮಾನ ಎಂದು ಕೇಂದ್ರ ಚುನಾವಣೆ ಆಯೋಗದ ಮುಖ್ಯಸ್ಥಜ್ಞಾನೇಶ್ ಕುಮಾರ್ ಹೇಳಿದ್ದಾರೆ. ಚುನಾವಣೆ ಆಯೋಗ ತಿಳಿಸಿದಂತೆ ರಾಹುಲ್ ಗಾಂಧಿ ಅಫಿಡವಿಟ್‌ಗೆ ಸಹಿ ಮಾಡ ಬೇಕು ಅಥವಾ ದೇಶದ ಜನರ ಮುಂದೆ ತಪ್ಪು ಒಪ್ಪಿಕೊಂಡು ಬಹಿರಂಗವಾಗಿ ಕ್ಷಮೆ ಯಾಚಿಸಬೇಕು ಎಂದು ಒತ್ತಾಯಿಸಿದ್ದಾರೆ.

{ ದಿನೇಶ್ ಗೂಳಿಗೌಡ } ವಿಧಾನ ಪರಿಷತ್ ಸದಸ್ಯ

ಮಹಿಳೆಯರಿಗೆ ಹೆಚ್ಚಿನ ಅವಕಾಶ ನೀಡಿದ ಯಾವುದಾದರೂ ಪಕ್ಷ ಇದ್ದರೆ ಅದು ಕಾಂಗ್ರೆಸ್ ಮಾತ್ರ. ವಿರೋಧ ಪಕ್ಷದ ನಾಯಕರಾಗಿದ್ದ ವಾಜಪೇಯಿ ಅವರು ಇಂದಿರಾಗಾಂಧಿ ಅವರ ಜನಪರ ದಿಟ್ಟ ಆಡಳಿತ ನೋಡಿ 'ಉಕ್ಕಿನ ಮಹಿಳೆ' ಎಂದು ಬಿರುದು ನೀಡಿದ್ದರು. ಲೋಕಸಭಾ ಸ್ಪೀಕರ್ ಸ್ಥಾನಕ್ಕೆ ಮೊದಲ ಬಾರಿಗೆ ಮಹಿಳೆಯರನ್ನು ಆಯ್ಕೆ ಮಾಡಿದ್ದೂ ಸಹ ಕಾಂಗ್ರೆಸ್ ಪಕ್ಷ.

ಶಾಲೆಗಳ ಉಳಿಸಲು ಕೈಜೋಡಿಸಿ

ಕೃಷ್ಣೇಗೌಡ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷ ಎಚ್.ಕೆ.ನಂದೀಶ್‌ಗೌಡ ಮಕ್ಕಳಿಗೆ ಶಾಲಾ ಸಾಮಗ್ರಿಗಳನ್ನು ವಿತರಿಸಿದರು.

ಮದ್ದೂರು: ಸರಕಾರಿ ಶಾಲೆಗಳಲ್ಲಿ ಮಕ್ಕಳ ಹಾಜರಾತಿ ಸಂಖ್ಯೆ ಕಡಿಮೆಯಾಗುತ್ತಿದ್ದು ಶಾಲೆಗಳ ಉಳಿವಿಗೆ ಪೋಷಕರ ಮತ್ತು ಸ್ಥಳೀಯರ ಸಹಕಾರ ಅತ್ಯಗತ್ಯವೆಂದು ಕೃಷ್ಣೇಗೌಡ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷ ಎಚ್. ಕೆ.ನಂದೀಶ್‌ಗೌಡ ಅಭಿಪ್ರಾಯ ಪಟ್ಟರು.

ತಾಲೂಕಿನ ಹುಳಗನಹಳ್ಳಿ ಗ್ರಾಮದಲ್ಲಿ ಸ್ವಾತಂತ್ರ್ಯ ದಿನಾಚರಣೆ ನಿಮಿತ್ತ ಮಕ್ಕಳಿಗೆ ಮೂರು ಜತೆ ಸಮವಸ್ತ್ರ, ಟೈ, ಬೆಲ್ಟ್ ಹಾಗೂ ಇನ್ನಿತರ ಸಾಮಗ್ರಿಗಳನ್ನು ವಿತರಿಸಿ ಅವರು ಮಾತನಾಡಿದರು.

ಸರಕಾರಿ ಶಾಲೆಗಳು ಉಳಿಸಿ ಬೆಳೆಸಬೇಕಾದರೆ ಸ್ಥಳೀಯರ ಜತೆಗೆ ಗ್ರಾಂ.ಪಂ. ಜಿ.ಪಂ. ಹಾಗೂ ತಾಲೂಕು ಪಂಚಾಯಿತಿ ಸದಸ್ಯರು ಸೇರಿದಂತೆ ಗ್ರಾಮದ ಯಜಮಾನರುಗಳು ಜವಾಬ್ದಾರಿಯನ್ನು ತೆಗೆದುಕೊಂಡು ಮಕ್ಕಳನ್ನು ದಾಖಲು ಮಾಡುವ ವಾತಾವರಣ ಸೃಷ್ಟಿ ಮಾಡಬೇಕೆಂದು ಮನವಿ ಮಾಡಿದರು.

ಕೃಷ್ಣೇಗೌಡ ಚಾರಿಟಬಲ್ ಟ್ರಸ್ಟ್ ಕಳೆದ ಹಲವಾರು ವರ್ಷಗಳಿಂದ ಗ್ರಾಮೀಣ ಭಾಗದ ಸರಕಾರಿ ಶಾಲೆಗಳ ಉನ್ನತಿಕರಣಕ್ಕೆ ಹೆಚ್ಚಿನ ಒತ್ತು ನೀಡುತ್ತಿದ್ದು ಮುಂದಿನ ದಿನಗಳಲ್ಲಿ ವಿದ್ಯಾರ್ಥಿಗಳಿಗೆ ಮತ್ತಷ್ಟು ಅನುಕೂಲ ಕಲ್ಪಿಸುವುದಾಗಿ ಹೇಳಿದರು. ವಿಜೇತರಾದ ಮಕ್ಕಳಿಗೆ ಎನ್. ಕೃಷ್ಣೇಗೌಡರ ಧರ್ಮಪತ್ನಿ ಜಯಲಕ್ಷ್ಮಮ್ಮ ಬಹುಮಾನ ವಿತರಿಸಿದರು.ಎಸ್.ಡಿ.ಎಂ.ಸಿ ಅಧ್ಯಕ್ಷ ಪ್ರಸನ್ನಕುಮಾರ್, ಉಪಾಧ್ಯಕ್ಷ ಮಲ್ಲಿಕಾ, ಗ್ರಾ.ಪಂ. ಅಧ್ಯಕ್ಷೆ ವೀಣಾ, ಸದಸ್ಯೆ ಕಮಲಾಕ್ಷಿ, ಪಿಡಿಒ ಲೀಲಾವತಿ, ಮುಖ್ಯ ಶಿಕ್ಷಕ ಶ್ರೀನಿವಾಸ್, ಸಹ ಶಿಕ್ಷಕ ಉದಯ್, ಮುಖಂಡರಾದ ರವಿ, ಚೆಲುವರಾಜ್ ಇದ್ದರು.

ನಾಯಕ ಸಮಾಜದಿಂದ ಮೈಸೂರಿನಲ್ಲಿ29 ರಂದು | ಚಾಮರಾಜನಗರದಲ್ಲಿ ಸೆ.2ರಂದು

ರಾಜಣ್ಣ ವಜಾ ಖಂಡಿಸಿ ಸಮಾಜ ಪ್ರತಿಭಟನೆ

ಚಾಮರಾಜನಗರ: ಸಚಿವ ಸಂಪುಟದಿಂದ ಸಹಕಾರ ಸಚಿವ ಕೆ. ಎನ್. ರಾಜಣ್ಣ ಅವರನ್ನು ಏಕಾಏಕಿ ವಜಾಗೊಳಿಸಿರುವುದನ್ನು ಖಂಡಿಸಿ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯ ನಾಯಕ ಸಮುದಾಯದ ವತಿಯಿಂದ ಆ. 29 ರಂದು ಮೈಸೂರಿನಲ್ಲಿ, ಸೆ. 2 ರಂದು ಚಾಮರಾಜನಗರದಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಮೈಸೂರು ಮತ್ತು ಚಾಮರಾಜನಗರ ಜಿಲ್ಲಾ ನಾಯಕರ ಸಂಘದ ಅಧ್ಯಕ್ಷ ಎಂ.ರಾಮಚಂದ್ರ ಹೇಳಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ.. ಪತ್ರಿಕಾಗೋಷ್ಠಿಯಲ್ಲಿ ಅವರು ಅವರು ಮಾತನಾಡಿ, ಸಹಕಾರ ಸಚಿವರಾದ ರಾಜಣ್ಣ.. ಅವರು ಯಾವುದೇ ರೀತಿಯ ಭ್ರಷ್ಟಾಚಾರವಾಗಲಿ, ಯಾವುದೇ ಪಕ್ಷ ವಿರೋಧಿ ಚಟುವಟಿಕೆಗಳನ್ನು ಮಾಡಿಲ್ಲ. ಇದ್ದುದ್ದನ್ನು ನೇರವಾಗಿ ಮಾತನಾಡುವ ಸ್ವಭಾವ ಅವರದ್ದಾಗಿದೆ. ಇದನ್ನು ಖಂಡಿಸಿ ಆ. 29 ರಂದು ಮೈಸೂರಿನಲ್ಲಿ ಹಾಗೂ ಸೆ. 2 ರಂದು ಚಾಮರಾಜನಗರದಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ಎರಡು ಜಿಲ್ಲೆಯ ಸಮುದಾಯದ ಮುಖಂಡರು ಭಾಗವಹಿಸಿ ಯಶಸ್ವಿಗೊಳಿಸಿಕೊಡಬೇಕು ಎಂದು ರಾಮಚಂದ್ರ ಮನವಿ ಮಾಡಿದರು.



ಜಿಲ್ಲಾ ನಾಯಕರ ಸಂಘದ ಅಧ್ಯಕ್ಷ ಎಂ.ರಾಮಚಂದ್ರ ಮಾತನಾಡಿದರು.

ಆ. 28 ರಂದು ಮೈಸೂರಿನ ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನದ ಅವಣರದಲ್ಲಿ ಸಮಾವೇಶ ಗೊಂಡು ಅಲ್ಲಿಂದ ಮೆರವಣಿಗೆ ಹೊರಟು ಜಿಲ್ಲಾಡಳಿತ ಭವನಕ್ಕೆ ತೆರಳಿ ಡಿಸಿಗೆ ಮನವಿ ಸಲ್ಲಿಸಲಾಗುತ್ತದೆ. ಸೆ. 2 ರಂದು ಚಾಮರಾಜನಗರ ಚಾಮರಾಜೇಶ್ವರ ಪಾರ್ಕ್ ಬಳಿ ಸಮಾವೇಶಗೊಂಡು ಮೆರವಣಿಗೆ ಹೊರಟು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಗುವುದು ಎಂದರು.

ಚಾಮರಾಜನಗರ ನಾಯಕ ವಿದ್ಯಾಭಿವೃದ್ಧಿ ಸಂಘದ ಉಪಾಧ್ಯಕ್ಷ ಪು.ಶ್ರೀನಿವಾಸನಾಯಕ ಮಾತನಾಡಿ, ನಾಯಕ ಸಮುದಾಯದ ಪ್ರಭಾವಿ ಮುಖಂಡರು, ಸಹಕಾರ ಸಚಿವರಾದ ಕೆ.ರಾಜಣ್ಣ ಅವರಿಗೆ ಸರಕಾರ ಸೌಜನ್ಯಕ್ಕಾದರೂ ಒಂದು ತಿಳುವಳಿಕೆ ನೋಟಿಸ್ ನೀಡದೆ ಏಕಾಏಕಿ ವಜಾ ಮಾಡಿರುವುದು ನಾಯಕ ಸಮುದಾಯ ತೀವ್ರ ನೋವು ಉಂಟು ಮಾಡಿದೆ. ರಾಜಕೀಯ ಪಕ್ಷಗಳು ಸಮುದಾಯವನ್ನು ಸರಿಯಾಗಿ ನಡೆಸಿಕೊಳ್ಳುತ್ತಿಲ್ಲ. ಮುಂದಿನ ದಿನಗಳಲ್ಲಿ ತಕ್ಕಪಾಠ ಕಲಿಸುವುದಾಗಿ ಎಚ್ಚರಿಸಿದರು. ಪತ್ರಿಕಾಗೋಷ್ಠಿಯಲ್ಲಿ ಮುಖಂಡರಾದ ಮಹದೇವನಾಯಕ ಬಿ.ಕಾಂ. ಮಲ್ಲೇಶ್ ನಾಯಕ, ರಾಚಪ್ಪ, ವೆಂಕಟರಮಣನಾಯಕ, ಸುರೇಶ್ ಹಾಜರಿದ್ದರು.

ಈಶ ಗ್ರಾಮೋತ್ಸವದ ಲೀಗ್ ಪಂದ್ಯ 24ರಂದು

ಮಡಿಕೇರಿ: ಈಶ ಫೌಂಡೇಷನ್ ವತಿಯಿಂದ 17ನೇ ಆವೃತ್ತಿಯ 'ಈಶ ಗ್ರಾಮೋತ್ಸವ'ದ ಭಾಗವಾಗಿ ಕೊಡಗು ಕ್ಲಸ್ಟರ್‌ನ ವಾಲಿಬಾಲ್ ಮತ್ತು ಥ್ರೋಬಾಲ್ ನ 'ರೂರಲ್ ಪ್ರೀಮಿಯರ್ ಲೀಗ್' ಪಂದ್ಯಾವಳಿ ಆ.24 ರಂದು ಕುಶಾಲನಗರದ ಮಾದರಿ ಪ್ರಾಥಮಿಕ ಶಾಲಾ ಮೈದಾನದಲ್ಲಿ ನಡೆಯಲಿದೆ.

ಸುದ್ದಿ ಗೋಷ್ಠಿಯಲ್ಲಿ ಈ ಕುರಿತು ಮಾಹಿತಿ ನೀಡಿದ ಈಶ ಸಂಸ್ಥೆಯ ಸ್ವಯಂ ಸೇವಕರಾದ ಎಂ.ಎನ್. ಅಖಿಲ್, ಈಶ ಗ್ರಾಮೋತ್ಸವ ಕಳೆದ ಹದಿನಾರು ವರ್ಷಗಳಿಂದ ನಡೆಯುತ್ತಿದ್ದು, ಈ ಬಾರಿಯದ್ದು 17ನೇಯದು.ಗ್ರಾಮಿಣ ಸುಪ್ತ ಕ್ರೀಡಾ ಪ್ರತಿಭೆಗಳನ್ನು ಗುರುತಿಸಿ ಪ್ರೋತ್ಸಾಹಿಸುವುದು ಗ್ರಾಮೋತ್ಸವದ ಪ್ರಮುಖ ಉದ್ದೇಶವಾಗಿದೆಯೆಂದು ತಿಳಿಸಿದರು.

ಕೊಡಗು ಕ್ಲಸ್ಟರ್ ಮಟ್ಟದಲ್ಲಿ ಪುರುಷರಿಗೆ ವಾಲಿಬಾಲ್ ಮತ್ತು ಮಹಿಳೆಯರಿಗೆ ಥ್ರೋಬಾಲ್ ಪಂದ್ಯಾವಳಿ ನಡೆಯಲಿದೆ. ಗ್ರಾಮ ಪಂಚಾಯ್ತಿ ತಂಡಗಳಿಗೆ ಮಾತ್ರ ಅವಕಾಶ. ಯಾವುದೇ ಕಾರಣಕ್ಕೂ ರಾಜ್ಯ ಮಟ್ಟದ ಆಟಗಾರರಿಗೆ ಇದರಲ್ಲಿ ಅವಕಾಶವಿಲ್ಲ. ಆ.24 ರಂದು ಬೆಳಗ್ಗೆ 8 ಗಂಟೆಗೆ ಕುಶಾಲನಗರದಲ್ಲಿ ಪ್ರಾರಂಭಗೊಳ್ಳಲಿದೆಯೆಂದರು.

ತಂಡಗಳ ಪ್ರವೇಶ ಉಚಿತ. ತಂಡಗಳ ಹೆಸರನ್ನು ಮೊ.8861641755 ಗೆ ನೀಡಿ ನೋಂದಾಯಿಸಿಕೊಳ್ಳಬೇಕೆಂದು ತಿಳಿಸಿದರು. ವಿಜೇತ ತಂಡಗಳು ವಿಭಾಗೀಯ ಮಟ್ಟಕ್ಕೆ ಆಯ್ಕೆಯಾಗುತ್ತದೆ. ವಿಭಾಗೀಯ ಪಂದ್ಯಾವಳಿ ಸೆ.7ರಂದು ಚಿಕ್ಕಬಳ್ಳಾಪುರದ ಸದ್ಗುರು ಸನ್ನಿಧಿಯಲ್ಲಿ ನಡೆಯಲಿದೆ. ಅಂತಿಮ ಪಂದ್ಯಾವಳಿ ಸೆ.21 ರಂದು ಕೊಯಂಬತ್ತೂರಿನಲ್ಲಿದೆ. ವಾಲಿಬಾಲ್ ಮತ್ತು ಥ್ರೋಬಾಲ್ ವಿಜೇತ ತಂಡಕ್ಕೆ ತಲಾ 5 ಲಕ್ಷ ರೂ.ಪ್ರೈಜ್ ನೀಡುವುದಾಗಿ ಹೇಳಿದರು. ಆಟಗಾರರಾದ ಕಟ್ಟೆಮನೆ ಮಿಲನ ಅವರು ಮಾತನಾಡಿ, ಕಳೆದ ಎರಡು ವರ್ಷಗಳಿಂದ ತಮ್ಮ ತಂಡ ಪಂದ್ಯಾವಳಿಯಲ್ಲಿ ಛಾಂಪಿಯನ್ ಆಗಿ ಹೊರಹೊಮ್ಮಿರುವುದಾಗಿ ತಿಳಿಸಿದರು. ಆಟಗಾರ್ತಿ ಬಿದ್ರುಪಣೆ ಚಂದ್ರಕಲಾ ಕೆ.ಎಂ. ಇದ್ದರು.

ಧರ್ಮಸ್ಥಳ ವಿರುದ್ಧ ಸಂಚು ಖಂಡಿಸಿ ನಾಳೆ ಪ್ರತಿಭಟನೆ

ಕೆ.ಆರ್.ಪೇಟೆ: ಶ್ರೀಕ್ಷೇತ್ರ ಧರ್ಮಸ್ಥಳ ವಿರುದ್ಧ ಸಂಚು ಹೂಡುತ್ತಿರುವ ಕಿಡಿಗೇಡಿಗಳನ್ನು ಕೂಡಲೇ ಬಂಧಿಸಿ ತ್ವರಿತಗತಿಯಲ್ಲಿ ವಿಚಾರಣೆ ನಡೆಸಿ ಶಿಕ್ಷೆಗೆ ಒಳಪಡಿಸುವಂತೆ ನಿವೃತ್ತ ಪ್ರಾಂಶುಪಾಲ ಕೆ ಕಾಳೇಗೌಡ ಆಗ್ರಹಿಸಿದರು.

ಅವರು ಪಟ್ಟಣದಲ್ಲಿರುವ ಮಲ್ಲಿಕಾರ್ಜುನ ಚಾರಿಟೇಬಲ್ ಟ್ರಸ್ಟ್ ಕಚೇರಿಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಇದೇ ಆ.20ರ ಬುಧವಾರ ಬೆಳಿಗ್ಗೆ 11 ಗಂಟೆಗೆ ಪ್ರವಾಸಿ ಮಂದಿರದಲ್ಲಿ ತಾಲೂಕು ಧರ್ಮಸ್ಥಳ ಅಭಿಮಾನಿಗಳ ವೇದಿಕೆ,ಮಂಜುನಾಥೇಶ್ವರ ಭಕ್ತಾದಿಗಳು ಸೇರಿ ತೆಂಡೇಕೆರೆ ಕ್ಷೇತ್ರ ಗಂಗಾಧರ ಶಿವಾಚಾರ್ಯ ಸ್ವಾಮೀಜಿ,ಕಾಪನಹಳ್ಳಿ ಗವಿಮಠ ಸ್ವತಂತ್ರ ಚೆನ್ನವೀರ ಸ್ವಾಮೀಜಿ,ಬೇಬಿ ಮಠ ಶಿವಬಸವ ಸ್ವಾಮೀಜಿ ನೇತೃತ್ವದಲ್ಲಿ ಸುಮಾರು ಹತ್ತು ಸಾವಿರ ಮಂದಿ ಮೆರವಣಿಗೆ ಹೊರಟು ತಹಸೀಲ್ದಾರ್ ಮನವಿ ಸಲ್ಲಿಸುವುದಾಗಿ ಎಂದರು.

ಪವಿತ್ರ ಧಾರ್ಮಿಕ ಸಂಸ್ಥೆ ಶ್ರೀಕ್ಷೇತ್ರ ಧರ್ಮಸ್ಥಳ, ಶ್ರೀಮಂಜುನಾಥಸ್ವಾಮಿ ದೇವಾಲಯ ಹಾಗೂ ಪೂಜ್ಯ ಡಿ ವೀರೇಂದ್ರ ಹೆಗ್ಗಡೆ ಕುಟುಂಬಕ್ಕೆ ಕಳಂಕ ತರಲು ಒಳಸಂಚು ಷಡ್ಯಂತ್ರ ನಡೆಸುತ್ತಿರುವ ವಿರುದ್ಧ ಸೂಕ್ತ ತನಿಖೆ ನಡೆಸಿ ಕ್ರಮ ಕೈಗೊಳ್ಳುವಂತೆ ಜನಾಗ್ರಹ ನಡೆಸಲಾಗುವುದು. ಕಳೆದ ಕೆಲವು ವರ್ಷಗಳಿಂದ ಗಿರೀಶ್ ಮಟ್ಟಣ್ಣವರ್,ಮಹೇಶ್ ಶೆಟ್ಟಿ ತಿಮ್ಮರೋಡಿ,ಸಮೀರ್,ಸಂತೋಷ್ ಶೆಟ್ಟಿ, ಜಯಂತ್,ಅಜಯ್ ಅಂಚನ್ ಧರ್ಮಸ್ಥಳ ಮಂಜುನಾಥೇಶ್ವರ ಹಾಗೂ ಡಿ ವೀರೇಂದ್ರ ಹೆಗ್ಗಡೆ ಕುಟುಂಬವನ್ನು ಕೀಳು ಮಟ್ಟದ ಭಾಷೆಯನ್ನು ಉಪಯೋಗಿಸಿ ವೀಡಿಯೋ ತುಣುಕುಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಡುತ್ತಿರುವುದು ಕೋಟ್ಯಾಂತರ ಭಕ್ತರ ಧಾರ್ಮಿಕ ಭಾವನೆಗಳಿಗೆ ಧಕ್ಕೆಯಾಗಿದೆ..ಆದ್ದರಿಂದ ಸುಳ್ಳು ಸುದ್ದಿ ಪ್ರಚಾರ ಮಾಡುತ್ತಿರುವವರ ವಿರುದ್ಧ ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕೆಂದು ಸರಕಾರಕ್ಕೆ ಆಗ್ರಹಿಸಿದರು.

ಜಿಲ್ಲಾ ಜನಜಾಗೃತಿ ವೇದಿಕೆ ಅಧ್ಯಕ್ಷ ಆರ್‌ಟಿಒ ಮಲ್ಲಿಕಾರ್ಜುನ್, ಪ್ರಥಮ ದರ್ಜೆ ಗುತ್ತಿಗೆದಾರ ಅಕ್ಕಿಹೆಬ್ಬಾಳು ರಘು,ಕೆ ಎಸ್ ರಾಜೇಶ್, ತೋಟಪ್ಪ ಶೆಟ್ಟಿ, ವೀರಶೈವ ಮಹಾಸಭಾದ ಅಧ್ಯಕ್ಷ ಸುಜೇಂದ್ರಕುಮಾರ್, ಕುಮಕುಮಾರಸ್ವಾಮಿ, ಎಂಡಿಸಿಸಿ ಬ್ಯಾಂಕ್ ಮಾಜಿ ನಿರ್ದೇಶಕ ಚನ್ನಬಸಪ್ಪ,ನಿರಂಜನ,ಪತ್ರಕರ್ತ ಕೆ ಆರ್ ನೀಲಕಂಠ, ಹರೀಶ್, ನಳಿನಿ ಇದ್ದರು.

150 ಕಾರುಗಳ ಧರ್ಮಸ್ಥಳ ಯಾತ್ರೆ ಆ.23ರಂದು:ಶಾಸಕ

ನೆಲಮಂಗಲ: ಸೌಜನ್ಯ ಪ್ರಕರಣಕ್ಕೆ ಸಂಬಂಧಿಸಿದಂತೆ ಕೆಲವರು ಧರ್ಮಸ್ಥಳ ಮಂಜುನಾಥಸ್ವಾಮಿ ಹಾಗೂ ಧರ್ಮಾಧಿಕಾರಿ ವಿರೇಂದ್ರ ಹೆಗ್ಗಡೆ ಅವರ ಬಗ್ಗೆ ಅಪಪ್ರಚಾರ ಮಾಡುತ್ತಿದ್ದು, ಅದನ್ನು ಖಂಡಿಸಿ ಆ.23ರಂದು ಬೃಹತ್ ಕಾರು ರ್‍ಯಾಲಿ ಹಮ್ಮಿಕೊಳ್ಳಲಾಗಿದೆ ಎಂದು ಶಾಸಕ ಎನ್.ಶ್ರೀನಿವಾಸ್ ಮಾಹಿತಿ ನೀಡಿದ್ದಾರೆ.

ಜನಸಾಮಾನ್ಯರಿಗೆ ಇರುವ ಭಾವನೆ ಹಾಗೂ ಧರ್ಮಸ್ಥಳದ ಬಗ್ಗೆ ನಾಡಿನ ಭಕ್ತಿಗೆ ಚ್ಯುತಿ ಬರಬಾರದು ಎಂದು ಧರ್ಮಸ್ಥಳ ಯಾತ್ರೆ ಕೈಗೊಳ್ಳ ಲಾಗಿದೆ. ನೆಲಮಂಗಲ ಕ್ಷೇತ್ರದ ಜನತೆ ಈ ಅಪಪ್ರಚಾರವನ್ನು ಖಂಡಿಸುತ್ತೇವೆ. ಇದನ್ನು ವಿರೋಧಿಸಿ ಕ್ಷೇತ್ರದ ಪರವಾಗಿ 150 ಕಾರುಗಳ ಮೂಲಕ ಧರ್ಮಸ್ಥಳ ಯಾತ್ರೆ ಕೈಗೊಳ್ಳಲಾಗುತ್ತದೆ ಎಂದರು. ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸಬೇಕು. ಆಗಮಿಸುವವರು ಕಾರುಗಳನ್ನು ನೋಂದಣಿ ಮಾಡಬೇಕು ಎಂದು ಮಾಹಿತಿ ನೀಡಿದರು.

ಶ್ರೀ ಕೃಷ್ಣ ಜಯಂತಿ: ಮಕ್ಕಳಿಗೆ ನಾನಾ ಸ್ಪರ್ಧೆಗಳು

ಕೆ.ಆರ್.ನಗರ: ಇಲ್ಲಿನ ಶ್ರೀಕೃಷ್ಣ ಮಂದಿರದಲ್ಲಿ ಕೃಷ್ಣ ಪ್ರತಿಷ್ಠಾನದ ಶ್ರೀ ಕೃಷ್ಣ ಜಯಂತಿ ಆಚರಣೆಯನ್ನು ಅತ್ಯಂತ ಸಡಗರ ಸಂಭ್ರಮದಿಂದ ಆಚರಿಸಲಾಯಿತು.

ಮಕ್ಕಳಿಗೆ ಚಿತ್ರ ಬಿಡಿಸುವ ಸ್ಪರ್ಧೆ ಆಯೋಜಿಸಲಾಗಿತ್ತು. ನೂರಕ್ಕೂ ಹೆಚ್ಚು ಮಕ್ಕಳು ಸ್ಥಳದಲ್ಲೇ ಚಿತ್ರ ಬಿಡಿಸುವ ಸ್ಪರ್ಧೆಯಲ್ಲಿ ಭಾಗವಹಿಸಿದ್ದರು. ಬಿಳಿಯ ಹಾಳೆಯ ಮೇಲೆ ಬಣ್ಣ ಬಣ್ಣದ ಚಿತ್ತಾರಗಳ ಬಿಡಿಸುವ ಮೂಲಕ ತಮ್ಮ ಕೈಚಳಕ ಮೆರೆದರು.

ಶ್ರೀಕೃಷ್ಣ ದೇವರಿಗೆ ವಿಶೇಷ ಪೂಜೆ ಅಲಂಕಾರ ಮಹಾಪೂಜೆ, ಪ್ರಸಾದ ವಿನಿಯೋಗ ನಡೆಸಲಾಯಿತು. ಮಹಾಪೂಜೆಗೂ ಮುನ್ನ ಪ್ರತಿಷ್ಠಾನದ 60ಕ್ಕೂ ಹೆಚ್ಚು ಸದಸ್ಯರು ವಿಷ್ಣು ಸಹಸ್ರನಾಮ ಪಠಿಸುವ ಮೂಲಕ ,ಲಕ್ಷ ತುಳಸಿ ಅರ್ಚನೆಯನ್ನು ಭಕ್ತಿ ಭಾವದಿಂದ ನೆರವೇರಿಸಿದರು.

ನಂತರ ಶ್ರೀ ಕೃಷ್ಣ ರಾಧಾ ವೇಷ ತೊಟ್ಟ ಮಕ್ಕಳನ್ನು ಮೆರವಣಿಗೆ ಮೂಲಕ ಶ್ರೀಕೃಷ್ಣ ಮಂದಿರಕ್ಕೆ ಕರೆತರಲಾಯಿತು. ಕೃಷ್ಣ ರಾಧಾ ವೇಷಧಾರಿಗಳಿಗೆ ನಡೆದ ಮೊಸರು ಕುಡಿಕೆ ಒಡೆಯುವ ಕಾರ್ಯಕ್ರಮ ಸಾರ್ವಜನಿಕರ ಗಮನ ಸೆಳೆಯಿತು.

ಶ್ರೀಕೃಷ್ಣ ಪ್ರತಿಷ್ಠಾನದ ಗೌರವಾಧ್ಯಕ್ಷ ಡಾ. ಮೋಹನ್ ದಾಸ್ ಭಟ್, ಡಾ. ಜನಾರ್ದನ ಭಟ್, ಡಾ. ಗೋವರ್ಧನಾಚಾರ್, ಎ ನಾಗರಾಜ್, ಯುಎ ಕೃಷ್ಣ ಭಟ್, ನಾಗರಾಜ ಪುರಾಣಿಕ್, ಕೃಷ್ಣಮೂರ್ತಿ, ಕೆ ನಾಗೇಶ್, ಚೈತನ್ಯ, ಕೇಶವ, ರಘು, ಪದ್ಮನಾಭ, ಆಟೋ ಶಂಕರ್, ಹೃಷಿಕೇಶ್, ಆನಂದ್, ಹರ್ಷ, ಶಮಂತ್, ಶ್ರೀನಿಧಿ, ರಮಾನಂದ್, ಕೆ ನರಸಿಂಹ ಸೋಮಯಾಜಿ, ಪ್ರಶಾಂತ್, ಪ್ರದೀಪ್, ಡಾ.ಅಕ್ಷತಾ, ಅರ್ಪಿತ, ರಕ್ಷಾ ,ವರುಣ್, ಮೋಹನ್ ರಾವ್, ಹರಿಯಣ್ಣ ಇತರರಿದ್ದರು.

ನಾಗಮೋಹನ್ ವರದಿ ಜಾರಿಗೆ ಆಗ್ರಹ

ತಿ.ನರಸೀಪುರ: ನ್ಯಾ. ನಾಗಮೋಹನ್ ದಾಸ್ ವರದಿ ಅತ್ಯಂತ ಪಾರದರ್ಶಕ ಮತ್ತು ವೈಜ್ಞಾನಿಕವಾಗಿದ್ದು, ವರದಿಯನ್ನು ಯಥಾವತ್ ಜಾರಿ ಮಾಡುವಂತೆ ತಾಲೂಕು ಮಾದಿಗ ಸಮುದಾಯ ಮುಖಂಡರು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಸಾಮಾಜಿಕ ನ್ಯಾಯ ಪರ ವೇದಿಕೆ ಮುಖಂಡ ಮರಡೀಪುರ ರವಿಕುಮಾರ್ ಮಾತನಾಡಿ, ನ್ಯಾ.ನಾಗಮೋಹನ್ ದಾಸ್ ವರದಿ ಅತ್ಯಂತ ಪಾರದರ್ಶಕ ಮತ್ತು ವೈಜ್ಞಾನಿಕವಾಗಿದ್ದು, ವರದಿಯ ಸಮೀಕ್ಷೆ ವೇಳೆ ಸರ್ಕಾರದಿಂದ ಜನರಿಗೆ ನೀಡಿರುವ ಅಧಿಕೃತ ದಾಖಲಾತಿಗಳಾದ ಆಧಾರ್ ಕಾರ್ಡ್, ಪಡಿತರ ಚೀಟಿ ಮತ್ತು ಇನ್ನಿತರೆ ದಾಖಲೆಗಳನ್ನು ಬಳಸಿ ಜನಸಂಖ್ಯೆವಾರು ಸಮೀಕ್ಷೆ ನಡೆಸಿರುವುದಲ್ಲದೆ, ರಾಜ್ಯದ ವಿವಿಧ ಇಲಾಖೆಯಲ್ಲಿರುವ ಎಲ್ಲ ವೃಂದಗಳ ಪರಿಶಿಷ್ಟ ಜಾತಿಯ ಅಧಿಕಾರಿಗಳ ದತ್ತಾಂಶ ಕ್ರೋಢಿಕರಣ ಮಾಡಿದೆ. ಅಲ್ಲದೆ ಪರಿಶಿಷ್ಟ ಜಾತಿಯಲ್ಲಿನ ಜನಾಂಗವಾರು ಆರ್ಥಿಕ,ಶೈಕ್ಷಣಿಕ, ರಾಜಕೀಯ ಮತ್ತು ಔದ್ಯೋಗಿಕವಾಗಿ ಹಿಂದುಳಿದಿರುವಿಕೆಯನ್ನು ಪರಾಮರ್ಶಿಸಿ ವರದಿಯನ್ನು

ಮಾದಿಗ ಸಮುದಾಯ ಮುಖಂಡರು ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ತಯಾರಿಸಲಾಗಿದ್ದು, ಯಥಾವತ್ತಾಗಿ ಜಾರಿ ಮಾಡುವಂತೆ ಮನವಿ ಮಾಡಿದರು.

ಎಲ್.ಜಿ.ಹಾವನೂರು ವರದಿ, ಕಾಂತರಾಜ್ ಆಯೋಗ, ನ್ಯಾ.ಸದಾಶಿವ ಆಯೋಗ, ಜೆ.ಮಾಧುಸ್ವಾಮಿ ಮಧ್ಯಂತರ ವರದಿ ಮತ್ತು ಇತ್ತೀಚಿನ ನ್ಯಾ.ನಾಗಮೋಹನ್ ದಾಸ್ ವರದಿಗಳು ಸೇರಿದಂತೆ ಪರಿಶಿಷ್ಟ ಜಾತಿಗಳ ಎಲ್ಲ ಜಾತಿವಾರು ಸಮೀಕ್ಷೆಯಲ್ಲೂ ಮಾದಿಗರ ಸಂಖ್ಯೆಯೇ ಹೆಚ್ಚು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈ ಅಂಶವನ್ನು ಗಮನದಲ್ಲಿಟ್ಟುಕೊಂಡು ಜಾರಿ ಮಾಡುವ ಮುಖೇನ ಸಹಕರಿಸುವಂತೆ ಮುಖ್ಯಮಂತ್ರಿಗಳಿಗೆ ಮನವಿ ಮಾಡಿದರು.

ಗೋಷ್ಠಿಯಲ್ಲಿ ಗೋಪಾಲಪುರ ಮಂಜುನಾಥ್, ಮಲಿಯೂರು ಶಿವಕುಮಾರ್, ಕೆಬ್ಬೆ ಪ್ರಸಾದ್, ಸಿದ್ದನುಂಡಿ ಗೋಪಿ,ವಾಟಾಳು ಸಿದ್ದರಾಜು, ಹೊಸಹಳ್ಳಿ ಚಿನ್ನಸ್ವಾಮಿ, ರಂಗಚಾರಿ ಹುಂಡಿ ಸುನೀಲ್, ಸೋಸಲೆ ಭಾಸ್ಕರ್, ಕೇತಹಳ್ಳಿ ವಿಶ್ವ , ಮಹದೇವ್, ಗ್ರಾಪಂ ಸದಸ್ಯ ಚೇತನ್ , ಹೊಸನರೀ ಪುರ ಗುರುಸಿದ್ದಯ್ಯ ಇದ್ದರು.

ಸಮಾಚಾರ ಸಣ್ಣದಲ್ಲ

ಲೋಕಾ ಬಲೆಗೆ ಬಿದ್ದ ಲೇಬರ್ ಇನ್‌ಸ್ಪೆಕ್ಟರ್

ರಾಯಚೂರು: ಪೆಟ್ರೋಲ್ ಬಂಕ್ ಮಾಲೀಕರಿಂದ 30 ಸಾವಿರ ರು. ಲಂಚ ಪಡೆಯುತ್ತಿದ್ದ ವೇಳೆ ಇಲ್ಲಿನ ಕಾರ್ಮಿಕ ಇಲಾಖೆ ಲೇಬರ್ ಇನ್‌ಸ್ಪೆಕ್ಟರ್ ಅಬ್ದುಲ್ ಗನಿ ಅಲಿಯಾಸ್

ಅಮರ್ ಲೋಕಾಯುಕ್ತ ಬಲೆಗೆ ಬಿದ್ದಿದ್ದಾನೆ. ಪೆಟ್ರೋಲ್ ಬಂಕ್ ಮಾಲೀಕರ ಕೆಲಸ ಮಾಡಿಕೊಡಲು 30 ಸಾವಿರ ರು. ಲಂಚದ ಬೇಡಿಕೆ ಇಟ್ಟಿದ್ದ. ಹೀಗಾಗಿ ದೂರುದಾರ ನಾಗೀರೆಡ್ಡಿ ಎನ್ನುವವರು ಅಧಿಕಾರಿಗೆ ಸೋಮವಾರ ಹಣ ನೀಡುವಾಗ ಲೋಕಾಯುಕ್ತ ಅಧಿಕಾರಿಗಳ ತಂಡ ದಾಳಿ ನಡೆಸಿದ್ದು, ಆರೋಪಿಯನ್ನು ವಶಕ್ಕೆ ಪಡೆದಿದೆ. ದಾಳಿ ತಂಡದಲ್ಲಿ ಲೋಕಾಯುಕ್ತ ಎಸ್‌ಪಿ ಸತೀಶ ಚಿಟಗುಪ್ಪಿ, ಇನ್‌ಸ್ಪೆಕ್ಟರ್‌ಗಳಾದ ಕಾಳಪ್ಪ ಬಡಿಗೇರ್, ರವಿಪುರು ಷೋತ್ತಮ್ ಸೇರಿದಂತೆ ಸಿಬ್ಬಂದಿ ದಾಳಿ ತಂಡದಲ್ಲಿದ್ದರು.

ತಮ್ಮನಿಂದಲೇ ಅಣ್ಣನ ಕೊಲೆ

ಕೋಲಾರ: ಜಮೀನು ವಿವಾದದ ಹಿನ್ನೆಲೆಯಲ್ಲಿ ತಲ್ವಾರ್‌ನಿಂದ ತಲೆಗೆ ಹೊಡೆದು ತಮ್ಮನೇ ಅಣ್ಣನನ್ನು

ಬರ್ಬರವಾಗಿ ಕೊಲೆ ಮಾಡಿರುವ ಘಟನೆ ಕೋಲಾರ ಜಿಲ್ಲೆಯ ಬಂಗಾರಪೇಟೆ ತಾಲೂಕಿನ ರಾಮಾಪುರದಲ್ಲಿ ಸೋಮವಾರ ಮುಂಜಾನೆ ಈ ಘಟನೆ ನಡೆದಿದೆ. ಚಲಪತಿ ಅಲಿಯಾಸ್ ವೆಂಕಟಾಚಲಪತಿ (50) ಕೊಲೆಯಾದ ಅಣ್ಣ. ಪಕ್ಕದ ಮನೆಯಲ್ಲೇ ವಾಸ ಮಾಡುವ ತಮ್ಮ ಮುನಿರಾಜು (40) ಕೊಲೆ ಮಾಡಿ ಬಳಿಕ ಪೊಲೀಸರಿಗೆ ಫೋನ್ ಮಾಡಿ ವಿಷಯ ತಿಳಿಸಿದ್ದಾನೆ. ಸೋಮವಾರ ಬೆಳಗ್ಗೆ 6:30ರ ಸುಮಾರಿಗೆ ಕುರಿಗಳಿಗೆ ಮೇವು ನೀಡಲು ಹೋದ ಅಣ್ಣನನ್ನು ತಲ್ವಾರ್‌ನಿಂದ ಕೊಚ್ಚಿ ತಮ್ಮ ಕೊಲೆ ಮಾಡಿದ್ದಾನೆ. ಅಣ್ಣ ಚಲಪತಿ ಜಮೀನಿನಲ್ಲಿ ಸರಿಯಾಗಿ ಭಾಗ ಕೊಡದ ಹಿನ್ನೆಲೆ ಹಲವು ಬಾರಿ ನ್ಯಾಯ ಪಂಚಾಯ್ತಿಗಳನ್ನು ಮಾಡಲಾಗಿದೆ. ಜತೆಗೆ ಜಮೀನು ವಿವಾದ ನ್ಯಾಯಾಲಯದಲ್ಲೂ ಇದ್ದು, ಇತ್ತೀಚೆಗೆ ಹಿರಿಯರ ಸಮ್ಮುಖದಲ್ಲಿ 35 ಲಕ್ಷ ಹಣ ಕೊಟ್ಟು ತೀರ್ಮಾನ ಸಹ ಮಾಡಿಕೊಂಡಿದ್ದಾನೆ. ಆದರೆ ಸೋಮವಾರ ಮುಂಜಾನೆ ಕುರಿ ಶೆಡ್‌ಗೆ ತೆರಳಿದ ಅಣ್ಣನನ್ನ ಹಿಂಬಾಲಿಸಿದ ತಮ್ಮ ಮುನಿರಾಜು ಶೆಡ್ನಲ್ಲಿ ತಲ್ವಾರ್‌ನಿಂದ ಕೊಚ್ಚಿ ಕೊಲೆ ಮಾಡಿದ್ದಾನೆ. ಬೂದಿಕೋಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ವಿರಾಮ
ಪ್ರತಿ ಭಾನುವಾರ

ವಿಶ್ವವಾಣಿ ಕ್ಲಬ್ ಹೌಸ್
19.08.2025
ಸಂಜೆ: 06.55 ರಿಂದ 08.05 ರವರೆಗೆ
ಮಂಗಳವಾರದ ಅತಿಥಿ

ಡಾ. ವಿಜಯಲಕ್ಷ್ಮಿ ಬಾಳೆಕುಂದ್ರಿ
ವಿಷಯ
79ನೇ ಸ್ವಾತಂತ್ರ್ಯೋತ್ಸವ, ಕಲಿತದ್ದೇನು?
vishwavani.news

ತುಂಗಭದ್ರಾ ಡ್ಯಾಮ್‌ನಿಂದ ನದಿಗೆ ಭಾರೀ ನೀರು, ನವಿಲುತೀರ್ಥ ಡ್ಯಾಮ್ ಭರ್ತಿ | ಕಲಬುರಗಿ, ಯಾದಗಿರಿಯಲ್ಲಿ ಬೆಳೆಹಾನಿ

ರಾಜ್ಯಾದ್ಯಂತ ಮಳೆಯೋ ಮಳೆ...

ಬೆಂಗಳೂರು: ರಾಜ್ಯಾದ್ಯಂತ ಕಳೆದ ಒಂದು ವಾರದಿಂದ ಎಡೆಬಿಡದೆ ಮಳೆ ಸುರಿಯುತ್ತಿರುವ ಪರಿಣಾಮ ಡ್ಯಾಮ್‌ಗಳು ಭರ್ತಿಯಾಗಿದ್ದು, ಹಳ್ಳ-ಕೊಳ್ಳ, ನದಿ ತೊರೆಗಳು ಮೈದುಂಬಿ ಹರಿಯುತ್ತಿವೆ. ಬೆಳಗಾವಿ, ಶಿವಮೊಗ್ಗ, ಕಲಬುರಗಿ, ಯಾದಗಿರಿ, ಕೊಡುಗು, ಹಾಸನ, ಹುಬ್ಬಳ್ಳಿ, ಬೀದರ್ ಜಿಲ್ಲೆಯಲ್ಲೂ ಮಳೆ ಆರ್ಭಟ ಮುಂದುವರಿದ್ದು, ಜಿಲ್ಲೆಗಳಲ್ಲಿ ಸುರಿದ ಮಳೆ ಬೆಳೆಯಿಂದ ಸಾವಿರಾರು ಎಕರೆ ಬೆಳೆ ಹಾನಿಗೀಡಾಗಿದೆ.

ಮಲೆನಾಡು ಸೇರಿದಂತೆ ತುಂಗಭದ್ರಾ ಜಲಾನಯನ ಪ್ರದೇಶದಲ್ಲಿ ಬಾರಿ ಮಳೆಯಾಗುತ್ತಿರುವ ಹಿನ್ನೆಲೆ ಹೊಸಪೇಟೆ ಬಳಿಯ ತುಂಗಭದ್ರಾ ಜಲಾಶಯಕ್ಕೆ ಅಪಾರ ಪ್ರಮಾಣದ ನೀರು ಹರಿದು ಬರುತ್ತಿದೆ. ಸದ್ಯ ಜಲಾಶಯಕ್ಕೆ 75,500 ಕ್ಯೂಸೆಕ್ ಒಳಹರಿವಿದ್ದು, ಜಲಾಶಯದಿಂದ 86,631 ಕ್ಯೂಸೆಕ್ ನೀರು ರಿಲೀಸ್ ಮಾಡಲಾಗಿದೆ.

105 ಟಿಎಂಸಿ ನೀರು ಸಂಗ್ರಹ ಸಾಮರ್ಥ್ಯದ ಜಲಾಶಯದಲ್ಲಿ ಸದ್ಯ 77 ಟಿಎಂಸಿ ಸಂಗ್ರಹವಾಗಿದೆ. ಕಳೆದ ವರ್ಷ ಕೊಚ್ಚಿ ಹೋಗಿದ್ದ 19ನೇ ಗೇಟ್‌ಗೆ ತಾತ್ಕಾಲಿಕ ಗೇಟ್ ಅಳವಡಿಕೆ ಮಾಡಿರೋದ್ರಿಂದ ಮುಂಜಾಗ್ರತಾ ಕ್ರಮವಾಗಿ 80 ಟಿಎಂಸಿ ನೀರು ಮಾತ್ರ ಶೇಖರಿಸಿಟ್ಟುಕೊಳ್ಳಲು ಟಿಬಿ ಬೋರ್ಡ್ ತೀರ್ಮಾನಿಸಿದೆ. ತುಂಗಾ, ಭದ್ರಾ ಹಾಗೂ ವರದಾ ನದಿಗಳಿಂದ ಅಪಾರ ಪ್ರಮಾಣದ ನೀರು ಜಲಾಶಯಕ್ಕೆ ಹರಿದು ಬರುತ್ತಿದೆ. ಹೀಗಾಗಿ ಸಂಜೆ ವೇಳೆಗೆ 1 ಲಕ್ಷ ಕ್ಯೂಸೆಕ್ ನೀರು ನದಿಗೆ ಬಿಡುಗಡೆ ಮಾಡುವ ಸಾಧ್ಯತೆ ಇದೆ.

ಹಳ್ಳ ದಾಟಿ ವ್ಯಕ್ತಿಯ ಅಂತ್ಯಸಂಸ್ಕಾರ: ಅಪಾಯದ ಮಟ್ಟವನ್ನೂ ಮೀರಿ ಉಕ್ಕಿ ಹರಿಯುತ್ತಿದ್ದ ಹಳ್ಳವನ್ನು ದಾಟಿ ಗ್ರಾಮಸ್ಥರು ಶವಸಂಸ್ಕಾರ ಮಾಡಿರುವ ಘಟನೆ ರಾಯಚೂರು ಜಿಲ್ಲೆಯ ಗೋಮರ್ಸಿ ಗ್ರಾಮದಲ್ಲಿ ನಡೆದಿದೆ. ಜಿಲ್ಲೆಯ ಸಿಂಧನೂರು ತಾಲೂಕಿನ ಗೋಮರ್ಸಿ ಗ್ರಾಮದಲ್ಲಿ ವೀರೇಶ ತೆಲುಗರ ಎನ್ನುವ ವ್ಯಕ್ತಿ ಮೃತಪಟ್ಟಿದ್ದರು. ಶನಿವಾರ ಶವಸಂಸ್ಕಾರ ಮಾಡಲು ಕುಟುಂಬಸ್ಥರು ತೀರ್ಮಾನಿಸಿದ್ದರು. ಆದರೆ, ಶವಸಂಸ್ಕಾರಕ್ಕೆ ಸೂಕ್ತ ವ್ಯವಸ್ಥೆ ಇಲ್ಲದೇ, ಸ್ಮಶಾನಕ್ಕೆ ಹಳ್ಳ ದಾಟಿ ಹೋಗಬೇಕಿದ್ದರಿಂದ ಗ್ರಾಮದ ಜನರು ಸೇರಿದಂತೆ ಸಂಬಂಧಿಕರು ಪರದಾಡುವಂತಾಯಿತು. ಅನಿವಾರ್ಯವಾಗಿ ತುಂಬಿ ಹರಿಯುತ್ತಿರುವ ಹಳ್ಳದ ನೀರಿನಲ್ಲಿಯೇ ಶವಹೊತ್ತು ಅಂತ್ಯಸಂಸ್ಕಾರ ನೆರವೇರಿಸಿದರು.

ಕೊಡಗಿನಲ್ಲಿ ಮತ್ತೆ ಮುಂಗಾರು ಬಿರುಸು: ಕೊಡಗು ಜಿಲ್ಲೆಯಲ್ಲಿ ಚಳಿ, ಗಾಳಿ, ಮಳೆ ಮುಂದುವರಿದಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ. ಮಡಿಕೇರಿ ತಾಲೂಕು ಮತ್ತು ದಕ್ಷಿಣ ಕೊಡಗಿನಲ್ಲಿ ಉತ್ತಮ ಮಳೆಯಾಗುತ್ತಿದ್ದು, ಜಿಲ್ಲಾ ವ್ಯಾಪಿ ಮೈಕೊರೆಯುವ ಚಳಿ ಇದೆ. ಮಂಜು ಕವಿದ ವಾತಾವರಣದಿಂದ ತಿರುವಿನ ರಸ್ತೆಗಳಲ್ಲಿ ವಾಹನ ಚಾಲನೆ ಕಷ್ಟವಾಗುತ್ತಿದ್ದು, ಚಾಲಕನ ನಿಯಂತ್ರಣ ಕಳೆದು

ಶಿವಮೊಗ್ಗ ಭಾಗದಲ್ಲಿ ಬಿರುಸಿನ ಮಳೆ ಆಗುತ್ತಿರುವುದರಿಂದ ತುಂಗಭದ್ರಾ ಜಲಾಶಯಕ್ಕೆ ಅಪಾರ ಪ್ರಮಾಣದಲ್ಲಿ ನೀರು ಹರಿದು ಬರುತ್ತಿದೆ.

ತುಂಗ, ಭದ್ರಾ, ಲಿಂಗನಮಕ್ಕಿ ಪ್ರವಾಹ

ಶಿವಮೊಗ್ಗ ಜಿಲ್ಲೆಯಲ್ಲಿ ವರುಣಾರ್ಭಟ ಮುಂದುವರಿದಿದ್ದು, ನದಿಗಳು ಉಕ್ಕಿ ಹರಿಯಲಾರಂಭಿಸಿವೆ. ಜಿಲ್ಲೆಯ ಪ್ರಮುಖ ಜಲಾಶಯಗಳಾದ ತುಂಗ, ಭದ್ರಾ ಹಾಗೂ ಲಿಂಗನಮಕ್ಕಿ ಒಳಹರಿವಿನಲ್ಲಿ ಗಣನೀಯ ಏರಿಕೆ ಆಗಿದೆ. ಶಿವಮೊಗ್ಗ ತಾಲೂಕಿನ ಗಾಜನೂರಿನ ತುಂಗಾ ಜಲಾಶಯಕ್ಕೆ 73,415 ಕ್ಯೂಸೆಕ್ ಒಳಹರಿವಿದ್ದು, 76,656 ಕ್ಯೂಸೆಕ್ ನೀರನ್ನು ಹೊರ ಬಿಡಲಾಗುತ್ತಿದೆ. ಅಪಾರ ಪ್ರಮಾಣದ ನೀರು ಹೊರಬಿಟ್ಟಿರುವುದರಿಂದ ನದಿ ಪಾತ್ರದಲ್ಲಿ ಪ್ರವಾಹದ ಭೀತಿ ಎದುರಾಗಿದೆ. ಭದ್ರಾ ಡ್ಯಾಮ್‌ಗೂ 34,430 ಕ್ಯೂಸೆಕ್ ಹರಿದು ಬರುತ್ತಿದ್ದು, 39,245 ಕ್ಯೂಸೆಕ್ ನೀರನ್ನು ಡ್ಯಾಮ್‌ನಿಂದ ಹೊರ ಬಿಡಲಾಗುತ್ತಿದೆ. ಭದ್ರಾವತಿ ಬಳಿ ಅಪಾಯದ ಮಟ್ಟಮೀರಿ ಭದ್ರಾನದಿ ಹರಿಯುತ್ತಿದ್ದು, ಹೊಸ ಸೇತುವೆ ಜಲಾವೃತ ಆಗಿದೆ. ಮುನ್ನೆಚ್ಚರಿಕೆ ಕ್ರಮವಾಗಿ ವಾಹನ ಸಂಚಾರ ನಿರ್ಬಂಧಿಸಲಾಗಿದೆ. ಲಿಂಗನಮಕ್ಕಿ ಜಲಾಶಯ ಭರ್ತಿಗೆ ಇನ್ನೂ ಕೇವಲ 4 ಅಡಿ ಮಾತ್ರ ಬಾಕಿಯಿದೆ.

ಕೊಂಡ ಕೆಎಸ್‌ಆರ್‌ಟಿಸಿ ಬಸ್ ವೊಂದು ಧರೆಗೆ ಗುದ್ದಿದ ಘಟನೆ ಮುಟ್ಲು ಗ್ರಾಮದಲ್ಲಿ ನಡೆದಿದೆ. ಮರಳು ತುಂಬಿದ ಲಾರಿಯೊಂದು ಮಗುಚಿದ ಘಟನೆ ಮಡಿಕೇರಿ ಸಮೀಪ ಕೂಟುಹೊಳೆ ರಸ್ತೆಯಲ್ಲಿ ನಡೆದಿದ್ದು, ಯಾವುದೇ ಅನಾಹುತ ಸಂಭವಿಸಿಲ್ಲ. ಕತ್ತಲೆಕಾಡು ಗ್ರಾಮದಲ್ಲಿ ಮತ್ತು ವಾಲ್ನೂರು ತ್ಯಾಗತ್ತೂರು ಗ್ರಾ.ಪಂ ವ್ಯಾಪ್ತಿಯ ತ್ಯಾಗತ್ತೂರು ಚೆಟ್ಟಳ್ಳಿ ರಸ್ತೆಯಲ್ಲಿ ಬೃಹತ್ ಮರಗಳು ಬಿದ್ದು, ವಾಹನ ಸಂಚಾರಕ್ಕೆ ಅಡಚಣೆ ಉಂಟಾಯಿತು. ಗ್ರಾಮೀಣ ಭಾಗದಲ್ಲಿ ಮರ ಮತ್ತು ವಿದ್ಯುತ್ ಕಂಬಗಳು ಬಿದ್ದು ಹಾನಿ ಉಂಟಾಗಿದೆ. ನಿರಂತರ ಮಳೆಯಿಂದ ಜಿಲ್ಲೆಯ ಬಹುತೇಕ ಎಲ್ಲಾ ರಸ್ತೆಗಳು ಸಂಪೂರ್ಣವಾಗಿ ಹದಗೆಟ್ಟು ವಾಹನ ಸವಾರರು ಹರಸಾಹಸ ಪಡುತ್ತಿದ್ದಾರೆ.

ಬೆಳೆನಷ್ಟ: ಪರಿಹಾರಕ್ಕೆ ರೈತರು ಆಗ್ರಹ

ಕಳೆದ ಒಂದು ವಾರದಿಂದ ಯಾದಗಿರಿ ಜಿಲ್ಲೆಯ ಸುರಿಯುತ್ತಿರುವ ನಿರಂತರ ಮಳೆಯಿಂದಾಗಿ ಬೆಳೆಗಳಿಗೆ ಕಂಟಕವಾಗಿ ಪರಿಣಮಿಸಿದೆ. ಬೆಳೆಗಳು ಸಂಪೂರ್ಣ ನೀರುಪಾಲಾಗಿದ್ದು, ಅನ್ನದಾತರ ವಲಯದಲ್ಲಿ ಭಾರೀ ಆತಂಕ ಮೂಡಿದೆ, ಹತ್ತಿ, ಮೆಣಸಿನಕಾಯಿ ಬೆಳೆಗಳು ಸಂಪೂರ್ಣ ನೀರು ಪಾಲಾಗಿದ್ದು ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ತೊಗರಿ, ಹತ್ತಿ, ಹೆಸರು ಬೆಳೆ ನೀರು ಪಾಲಾಗಿ ತೇವಾಂಶ ಹೆಚ್ಚಾಗಿ ಬೆಳೆಗಳು ಮುಳುಗಿ ಹೋಗಿವೆ. ಶಹಾಪುರ ತಾಲೂಕಿನ ಗೋಗಿ, ಸಿಂಗನಹಳ್ಳಿ, ಮದ್ರಕಿ, ಹೊತಪೇಠಮ ಮೂಡಬೂಳ, ದೋರನಹಳ್ಳಿ ಸೇರಿ ವಿವಿಧೆಡೆ ಸಾವಿರಾರು ಎಕರೆಯಲ್ಲಿ ಬೆಳೆದ ಬೆಳೆ ಮಳೆ ಅಪೋಷನ ಆಗಿದೆ. ಕೂಡಲೇ ಸರಕಾರ ಬೆಳೆನಷ್ಟ ಸಮೀಕ್ಷೆ ನಡೆಸಿ ಪರಿಹಾರ ನೀಡಬೇಕೆಂದು ರೈತರು ಸರಕಾರಕ್ಕೆ ಆಗ್ರಹ ಮಾಡಿದ್ದಾರೆ.

ನೂರಾರು ಎಕರೆ ಬೆಳೆ ಹಾನಿ: ಕಲಬುರಗಿ ಜಿಲ್ಲೆಯಲ್ಲಿ ಕಳೆದ ಕೆಲ ದಿನಗಳಿಂದ ನಿರಂತರ ಮಳೆ ಆಗುತ್ತಿರುವ ಪರಿಣಾಮ ಹಳ್ಳ-ಕೊಳ್ಳಗಳು ತುಂಬಿ ಹರಿಯುತ್ತಿದ್ದು, ಬೆಣ್ಣೆತೊರಾ ಜಲಾಶಯದಿಂದ ನದಿಗೆ ಬಿಟ್ಟಿರುವ ನೀರು ಜಮೀನುಗಳಿಗೆ ನುಗ್ಗಿದೆ. ನೂರಾರು ಎಕರೆಯಲ್ಲಿ ಬೆಳೆದಿದ್ದ ಬೆಳೆಗಳು ಹಾನಿಗೀಡಾಗಿವೆ. ಜಿಲ್ಲೆಯ ಪ್ರಮುಖ ಬೆಳೆಗಳಾದ ಉದ್ದು, ಹೆಸರು ನೀರಿನಲ್ಲಿ ಕೊಚ್ಚಿ ಹೋಗಿದ್ದು, ಭಾಗದ ಬಹು ಬೆಳೆಯಾದ ತೊಗರಿ ಸಹ ನಾಶದತ್ತ ಸಾಗುತ್ತಿದೆ. ಇದರಿಂದ ರೈತಾಪಿ ವರ್ಗ ಸಂಕಟಕ್ಕೆ ಸಿಲುಕಿದ್ದು, ಆತಂಕದ ವಾತಾವರಣ ನಿರ್ಮಾಣವಾಗಿದೆ. ಅಫಜಲಪುರ, ಚಿಂಚೋಳಿ, ಆಳಂದ, ಸೇಡಂ ತಾಲೂಕುಗಳಲ್ಲಿ ಸಾಲಮಾಡಿ ಬಿತ್ತನೆ ಮಾಡಿದ ಹೆಸರು, ಉದ್ದು, ತೊಗರಿ ಬೆಳೆಗಳು ನೀರಿನಲ್ಲಿ ಕೊಚ್ಚಿ ಹೋಗಿದ್ದು, ರೈತರ ಬದುಕಿಗೆ ಭಾರೀ ಹೊಡೆತ ಬಿದ್ದಂತಾಗಿದೆ.

ಮಡಿಕೇರಿ ತಾಲೂಕಿನ ಸಂಪಾಜೆ ಹೋಬಳಿ ಹೆರವನಾಡು ಗ್ರಾಮದ ಕೇಟೋಳಿ ಮೋಹನ್ ರಾಜ್ ಎಂಬುವವರ ಕೊಟ್ಟಿಗೆ ಮೇಲೆ ವಿದ್ಯುತ್ ಕಂಬ ಬಿದ್ದು ಕೊಟ್ಟಿಗೆ ಸಂಪೂರ್ಣ ಹಾನಿಯಾಗಿದೆ.

ಕೋಡಿಬಿದ್ದ ಬೋಂತಿ ಕೆರೆ: ಬೆಳೆ ನಷ್ಟ

ಬೀದರ್ ಜಿಲ್ಲೆಯಲ್ಲಿ ಎರಡು ದಿನಗಳಿಂದ ಸುರಿಯುತ್ತಿರುವ ಮಳೆಗೆ ಸೇತುವೆಗಳು ಜಲಾವೃತವಾಗಿವೆ. ವಿವಿಧೆಡೆ ಸೇತುವೆ ಕುಸಿತದಿಂದ ಸಂಚಾರ ಸ್ಥಗಿತವಾಗಿದೆ. ಮಳೆಯಿಂದ ರೈತರ ಜಮೀನುಗಳಿಗೆ ನೀರು ನುಗ್ಗಿ ಅಪಾರ ಪ್ರಮಾಣದ ಹಾನಿಯಾಗಿದೆ. ಭಾನುವಾರ ರಾತ್ರಿ ಸುರಿದ ಮಹಾಮಳೆಗೆ ಜಿಲ್ಲೆಯ ಔರಾದ ತಾಲೂಕಿನ ಬೋಂತಿ ಕೆರೆಕೋಡಿ ಒಡೆದು ಅಪಾರ ಪ್ರಮಾಣದ ಹಾನಿಯಾಗಿದೆ. ಅಕ್ಕಪಕ್ಕದ ಜಮೀನುಗಳಿಗೆ ಕೆರೆಕೋಡಿ ನೀರು ನುಗ್ಗಿದೆ. ನೆರೆಯ ಭಂಡಾರಕುಮಟಾ ಹಾಗೂ ಬಾವಲ್‌ಗಾಂವ್ ಗ್ರಾಮಸ್ಥರನ್ನು ಎಚ್ಚರದಿಂದ ಇರುವಂತೆ ಸೂಚಿಸಲಾಗಿದೆ. ತಗ್ಗು ಪ್ರದೇಶದ ಜನರಿಗೆ ಸರಕಾರಿ ಶಾಲೆಯಲ್ಲಿ ಇರಲು ವ್ಯವಸ್ಥೆ ಮಾಡಲಾಗಿದೆ.

ನವಿಲು ತೀರ್ಥ ಡ್ಯಾಮ್ ಸಂಪೂರ್ಣ ಭರ್ತಿ

